ಸಂಪುಟ : 9 ಸಂಚಿಕೆ 304 ಪುಟ : 4+2 ಬೆಲೆ: 3.00 ಶುಕ್ರವಾರ ಜನವರಿ 17 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 304 Pages : 4+2 Price : 3.00 Friday January 17 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜನವರಿ 17ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 29 – ರಾಜೀವಗಾಂಧಿ ನಗರ, ಭಾಂಡಗೆ ಲೈನ್, ಗುಂಪಿನ ಮನೆ, ಪೊಲೀಸ್ ಸ್ಟೇಷನ್ ಕೆಳಗಿನ ಭಾಗ, ಗಾರ್ಡನ್ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 27 – ಕಾಶಿ ವಿಶ್ವನಾಥ ನಗರ, ಹನುಮಂತ ದೇವರ ಗುಡಿ, ದುರ್ಗಮ್ಮನ ಗುಡಿ, ಅಸೂಟಿಯವರ ಲೈನ್, ಕಣವಿಯವರ ಲೈನ್, ಸಂಭಾಪೂರ ರಸ್ತೆ, ಪಾಶಿಯವರ ಲೈನ್, ರೋಣದವರ ಲೈನ್, ಸಂಕಣ್ಣವರ ಲೇಔಟ್, ವಿ ಆರ್ ಎಲ್ ಆಫೀಸ್ ಮುಂದೆ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 26, 31 – ರಂಗನವಾಡ, ಜೋಡ ಮಾರುತಿ ಗುಡಿ, ಕಿಲ್ಲಾ, ಸುಣಗಾರ ಓಣಿ, ಝುಂಡಾಕಟ್ಟಿ, ಹಳೆ ಕಚೇರಿ ರಸ್ತೆ, ಗುಜ್ಜರ ಬಸ್ತಿ, ಕೋಳಿಕೇರಿ ಮೂಲಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 27 – ಹಮಾಲರ ಪ್ಲಾಟ್, ಕೆ ಹೆಚ್ ಪಾಟೀಲ ಬಡಾವಣೆ, ವೀರ ನಾರಾಯಣ ಬಡಾವಣೆ ಉಳಿದ ಕೆಲವು ಭಾಗಗಳು.

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರು ತಮ್ಮ ನೀರಿನ ಕರವನ್ನು ತುಂಬಲು ಗದಗ-ಬೆಟಗೇರಿ ನಗರಸಭೆ ಪ್ರಕಟಣೆಯ ಮೂಲಕ ತಿಳಿಸಿದೆ. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ್ ತುಂಬದೇ ಹೋದರೆ, ನಳಗಳನ್ನು ಬಂದ ಮಾಡಲಾಗುವುದು. ನೀರಿನ ಕರವನ್ನು ತುಂಬಲು ಗದಗ-ಬೆಟಗೇರಿ ನಗರಸಭೆಯ ಪ್ರಕಟಣೆ ಮೂಲಕ ಸಾರ್ವಜನಿಕರಿಗೆ ತಿಳಿಸಿದೆ.

## ಪೂಜಾರರಿಗೆ ಕೆಯುಡಬ್ಲ್ಯೂಜೆ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂಜೆ) ವಾರ್ಷಿಕ ಪ್ರಶಸ್ತಿಗಳನ್ನು ಪ್ರಕಟಿಸಿದ್ದು, 2024-25ನೇ ಸಾಲಿನ ಜಿ.ನಾರಾಯಣಸ್ವಾಮಿ ಪ್ರಶಸ್ತಿಗೆ (ಅತ್ಯುತ್ತಮ ಗ್ರಾಮಾಂತರ ವರದಿಗೆ) ಲಕ್ಷ್ಮೇಶ್ವರ ತಾಲೂಕಿನ ಸಂಯುಕ್ತ ಕರ್ನಾಟಕ ವರದಿಗಾರ ದಿಗಂಬರ ಮುರಳೀಧರ ಪೂಜಾರ ಭಾಜನರಾಗಿದ್ದಾರೆ.

ದಿಗಂಬರ ಪೂಜಾರ ಕಳೆದ ಎರಡು ದಶಕಗಳಿಂದ ಸಂಯುಕ್ತ ಕರ್ನಾಟಕ ದಿನಪತ್ರಿಕೆಯಲ್ಲಿ ವರದಿಗಾರರಾಗಿ ಸೇವೆ ಸಲ್ಲಿಸುತ್ತಿದ್ದು, ವಾರ ಪತ್ರಿಕೆ, ಪಾಕ್ಷಿಕ, ಮಾಸಿಕ ಪತ್ರಿಕೆಗಳಿಗೆ ಹಲವಾರು ಲೇಖನಗಳನ್ನು ಬರೆದ ಅನುಭವ ಹೊಂದಿದ್ದಾರೆ. ಎಂ.ಕಾಂ ಪದವೀಧರರಾದ ಇವರು 19-20 ವರ್ಷಗಳಿಂದ ಪತ್ರಿಕಾ ವರದಿಗಾರರಾಗಿ ಸೇವೆ ಸಲ್ಲಿಸುತ್ತಿದ್ದು, ಇವರಿಗೆ 2023ರಲ್ಲಿ ತಮಿಳುನಾಡಿನಲ್ಲಿ ಶ್ರೀ ಮಹಾತಪಸ್ವಿ ಸೇವಾ ಪ್ರತಿಷ್ಠಾನದಿಂದ ಪತ್ರಿಕಾಸಿರಿ ಎಂಬ ರಾಜ್ಯಮಟ್ಟದ ಪ್ರಶಸ್ತಿ ಸೇರಿದಂತೆ ಅನೇಕ ಗೌರವಗಳು ಸಂದಿವೆ.

ಕೆಯುಡಬ್ಲ್ಯೂಜೆ ವತಿಯಿಂದ ತುಮಕೂರಿನಲ್ಲಿ ದಿ.18 ಮತ್ತು 19ರಂದು ನಡೆಯುವ 39ನೇ ರಾಜ್ಯ ಮಟ್ಟದ ಪತ್ರಕರ್ತರ ಸಮ್ಮೇಳನದಲ್ಲಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವದು.

### ಜಿಲ್ಲೆಯಲ್ಲಿ ಮೊದಲ ಬಾರಿಗೆ ಆಯೋಜಿಸಿದ್ದ 'ಮಾಸಿಕ ಸಂತೆ' ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಜಿ.ಎಸ್. ಪಾಟೀಲ

# ಮಾಸಿಕ ಸಂತೆಯಿಂದ ಸ್ತ್ರೀ ಸಬಲೀಕರಣ

■ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮೀಣ ಭಾಗದ ಸ್ವ-ಸಹಾಯ ಸಂಘಗಳಲ್ಲಿ ತೊಡಗಿಕೊಂಡಿರುವ ಮಹಿಳೆಯರು ತಯಾರಿಸಿರುವ ಉತ್ಪನ್ನಗಳನ್ನು ಮಾರಾಟ ಮಾಡಲು ವೇದಿಕೆ ಕಲ್ಪಿಸಿ, ಅವರು ಆರ್ಥಿಕವಾಗಿ ಅಭಿವೃದ್ಧಿ ಹೊಂದುವಂತೆ ಉತ್ತೇಜನ ನೀಡುವುದಕ್ಕಾಗಿ ತಾಲೂಕು ಪಂಚಾಯಿತಿಯು 'ಮಾಸಿಕ ಸಂತೆ' ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಮೊದಲ ಬಾರಿಗೆ ರೋಣ ಪಟ್ಟಣದಲ್ಲಿ ಅನುಷ್ಠಾನಗೊಳಿಸಿದೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ ನುಡಿದರು.



ಪಟ್ಟಣದಲ್ಲಿ ಗುರುವಾರ ಮಾಸಿಕ ಸಂತೆಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆ (ಎನ್‌ಆರ್‌ಎಲ್‌ಎಂ) ಸಂಜೀವಿನಿ ಯೋಜನೆಯಡಿ ಆರ್ಥಿಕ ನೆರವು ಪಡೆದಿರುವ ಮಹಿಳಾ ಸ್ವ-ಸಹಾಯ ಗುಂಪುಗಳು ತಯಾರಿಸಿರುವ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟಕ್ಕಾಗಿ ಈ ಸಂತೆಯನ್ನು ಆಯೋಜಿಸಲಾಗುತ್ತಿದೆ. ಮೊದಲ ಮಾಸಿಕ ಸಂತೆಯನ್ನು ಪಟ್ಟಣದ ಸಂತೆಯಲ್ಲಿ ಗುರುವಾರ ನಡೆಸಲಾಯಿತು. ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯ 13 ಮಹಿಳಾ ಸ್ವ-ಸಹಾಯ ಸಂಘಗಳ ಸದಸ್ಯರು ತಾವು ತಯಾರಿಸಿದ ಉತ್ಪನ್ನಗಳನ್ನು ಪ್ರದರ್ಶನ ಹಾಗೂ ಮಾರಾಟಕ್ಕೆ ಇಟ್ಟಿದ್ದರು.

▶▶4ನೇ ಪುಟಕ್ಕೆ

> ಇಂದಿನ ಸಂತೆಯಲ್ಲಿ ಕೆಲವು ಸಂಘಗಳು ಭಾಗವಹಿಸಿವೆ. ಮುಂದಿನ ದಿನಗಳಲ್ಲಿ ಗ್ರಾಮ ಮಟ್ಟದಲ್ಲೂ ಇಂತಹ ಸಂತೆಗಳನ್ನು ಆರಂಭಿಸಲಾಗುವುದು. ಅಲ್ಲಿ ಹೆಚ್ಚಿನ ಸಂಘಗಳಿಗೆ ಅವಕಾಶ ಸಿಗಲಿದೆ. ಮಹಿಳೆಯರು ಆರ್ಥಿಕವಾಗಿ ಮುನ್ನಡೆ ಸಾಧಿಸಲು ಬೇಕಾದ ನೆರವನ್ನೂ ನೀಡಲಾಗುವುದು.
>
> – ಜಿ.ಎಸ್. ಪಾಟೀಲ. ಶಾಸಕರು, ರೋಣ.

ಜಿ.ಪಂ ಯೋಜನಾ ನಿರ್ದೇಶಕ ಎಮ್.ವಿ. ಚಳಗೇರಿ ಮಾತನಾಡಿ, ಸಂಜೀವಿನಿ ಸಂಘದ ಉತ್ಪನ್ನವು ಮಾರುಕಟ್ಟೆಯಲ್ಲಿ ಗುರುತಿಸಿಕೊಳ್ಳುವಂತೆ ಮಾಡಲು ಅದರಲ್ಲಿ ವಿಭಿನ್ನತೆಯಿರಬೇಕು, ಉತ್ಪನ್ನದ ಗುಣಮಟ್ಟ ಮತ್ತು ಅದನ್ನು ಗ್ರಾಹಕರಿಗೆ ನೀಡುವಾಗ ಉತ್ತಮ ಪ್ಯಾಕೇಜಿಂಗ್ ಹೊಂದಿರಬೇಕು. ಆಗ ಮಾತ್ರ ಉತ್ಪನ್ನಗಳು ಜನರನ್ನು ತಲುಪುತ್ತವೆ. ಮಾರುಕಟ್ಟೆಯಲ್ಲಿ ಸ್ಪರ್ಧಾತ್ಮಕ ಬೆಲೆಯನ್ನು ನಿಗದಿಪಡಿಸಿದಾಗ ಮಾತ್ರ ಹೆಚ್ಚಿನ ವಸ್ತುಗಳು ಮಾರಾಟವಾಗುತ್ತವೆ. ಈ ನಿಟ್ಟಿನಲ್ಲಿ ನೀವು ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.



### 20ರಂದು ಹೊಸ ಪ್ರಣಾಳಿಕೆ ಸಲ್ಲಿಕೆ: ರೈತ ಮುಖಂಡ ಶಂಕರಗೌಡ ಜಾಯನಗೌಡ್ರ ಮಾಹಿತಿ

# ರಾಜಕಾರಣದಲ್ಲಿ ನೀತಿ ಇಲ್ಲದಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ನೀತಿಯೇ ಇಲ್ಲದ ಇಂದಿನ ರಾಜಕಾರಣದಲ್ಲಿ ರೈತರ ಬೇಕು-ಬೇಡಿಕೆಗಳನ್ನು ಒಳಗೊಂಡ ಹೊಸ ಪ್ರಣಾಳಿಕೆಯನ್ನು ಇದೇ ಜ. 20ರಂದು ಬೆಂಗಳೂರಿನಲ್ಲಿ ಅದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲ್ಲಿಸಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖ ಬಣ) ಮುಖಂಡ ಶಂಕರಗೌಡ ಜಾಯನಗೌಡ್ರ ಹೇಳಿದರು.



ಗುರುವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಭ್ರಷ್ಟಾಚಾರಕ್ಕೆ ಎಲ್ಲೆ ಇಲ್ಲದಂತಾಗಿದೆ. ನದಿ ವಿವಾದ, ಗಡಿ ವಿವಾದಗಳು ಇತ್ಯರ್ಥವಾಗುತ್ತಿಲ್ಲ. ರೈತರ ಬೆಳೆದ ಬೆಳೆಗೆ ವೈಜ್ಞಾಕ ಬೆಲೆ ಸಿಗುತ್ತಿಲ್ಲ. ನೀರಾವರಿ, ಶಿಕ್ಷಣ ಕ್ಷೇತ್ರಗಳಲ್ಲಿ ಜ್ವಲಂತ ಸಮಸ್ಯೆಗಳಿವೆ. ರಾಷ್ಟ್ರೀಯ ಹೆದ್ದಾರಿ, ರೈಲ್ವೆ ಯೋಜನೆಗಳಲ್ಲಿ ತೀರಾ ಹಿಂದುಳಿದೆ. ರಾಜಕಾರಣದಲ್ಲಿ ನೀತಿ ಇಲ್ಲದಾಗಿದೆ. ಇದಕ್ಕೆ ಹೊಸ ರೂಪ ಕೊಡಬೇಕು ಎನ್ನುವ ಉದ್ದೇಶದಿಂದ ಕೋಡಿಹಳ್ಳಿ ಚಂದ್ರಶೇಖರ ನೇತೃತ್ವದಲ್ಲಿ ಕರ್ನಾಟಕದ ಹೊಸ ಪ್ರಣಾಳಿಕೆಯನ್ನು ಸಿದ್ಧಪಡಿಸಲಾಗಿದ್ದು,

▶▶4ನೇ ಪುಟಕ್ಕೆ

# ಹೆಲ್ಮೆಟ್ ಧರಿಸಿ ಜೀವ ಉಳಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬೈಕ್ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಬೈಕ್ ಸವಾರಿ ಮಾಡಬೇಕು. ಇದರಿಂದ ತಮ್ಮ ಜೀವ ಉಳಿಸಿಕೊಳ್ಳಲು ಸಾಧ್ಯವಾಗುವುದರ ಜೊತೆಗೆ ಸಂಚಾರಿ ನಿಯಮಗಳನ್ನು ಸಹ ಪಾಲಿಸಬೇಕೆಂದು ಶಿರಹಟ್ಟಿ ವೃತ್ತ ಆರಕ್ಷಕ ನಿರೀಕ್ಷಕ ನಾಗರಾಜ ಮಾಡಳ್ಳಿ ಹೇಳಿದರು.

ಅವರು ಗುರುವಾರ ಶಿರಹಟ್ಟಿಯ ನೆಹರು ವೃತ್ತದಲ್ಲಿ ಸಾರ್ವಜನಿಕರಿಗೆ ಪೊಲೀಸ್ ಇಲಾಖೆ ವತಿಯಿಂದ ರಸ್ತೆ ಸುರಕ್ಷತಾ ಸಪ್ತಾಹದ ಅಂಗವಾಗಿ ಆಯೋಜಿಸಿದ್ದ ಹೆಲ್ಮೆಟ್ ಜಾಗೃತಿ ಕುರಿತ ಅಭಿಯಾನ ಕಾರ್ಯಕ್ರಮದಲ್ಲಿ ಬೈಕ್ ಸವಾರರಿಗೆ ಜಾಗೃತಿ ಮೂಡಿಸಿದರಲ್ಲದೆ, ಕೆಲವರಿಗೆ ಉಚಿತವಾಗಿ ಹೆಲ್ಮೆಟ್‌ನ್ನು ನೀಡಿ ಮಾತನಾಡಿದರು.





ಇತ್ತೀಚಿನ ದಿನಗಳಲ್ಲಿ ಬೈಕ್ ಸವಾರರು ಅಪಘಾತದ ಸಂದರ್ಭಗಳಲ್ಲಿ ಸಾವನ್ನಪ್ಪುತ್ತಿರುವುದು ವಿಷಾದನೀಯ. ಇಂತಹ ಸಮಯದಲ್ಲಿ ಹೆಲ್ಮೆಟ್ ಧರಿಸಿದರೆ ಜೀವವನ್ನು ಉಳಿಸಿಕೊಳ್ಳಲು ಸಾಧ್ಯವಾಗುತ್ತದೆ. ಆದ್ದರಿಂದ ಪ್ರತಿಯೊಬ್ಬ ಬೈಕ್ ಸವಾರರೂ ಹೆಲ್ಮೆಟ್ ಧರಿಸಬೇಕು, ಜೊತೆಗೆ ಹಿಂಬದಿ ಸವಾರರು ಸಹ ಹೆಲ್ಮೆಟ್ ಧರಿಸಬೇಕು.

ಇದನ್ನು ಪಾಲನೆ ಮಾಡದಿರುವವರಿಗೆ ಕಾನೂನಿನ ಪ್ರಕಾರ ದಂಡ ವಿಧಿಸಲಾಗುವುದು. ಇದಕ್ಕೆ ಅವಕಾಶ ನೀಡದೇ ನಿಮ್ಮ ಸುರಕ್ಷತೆಯ ಸಲುವಾಗಿ ಹೆಲ್ಮೆಟ್ ಕಡ್ಡಾಯವಾಗಿ ಧರಿಸಬೇಕೆಂದು ಹೇಳಿದರು.

ಪಿಎಸ್‌ಐ ಚನ್ನಯ್ಯ ದೇವೂರ ಹಾಗೂ ಪೊಲೀಸ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಸಂಪತ್ತಿನ ಜೀವನವಲ್ಲ, ಸಂತೃಪ್ತ ಜೀವನ ನಡೆಸಿ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಂಪತ್ತಿನ ಜೀವನಕ್ಕಿಂತ ಸಚಿತೃಪ್ತ ಜೀವನ ಸಾಗಿಸಬೇಕು. ಅಂದಾಗ ಬದುಕು ಸುಂದರವಾಗುತ್ತದೆ ಎಂದು ಮಣಕವಾಡ ದೇವಮಂದಿರಮಠದ ಅಭಿನವ ಮೃತ್ಯುಂಜಯ ಸ್ವಾಮೀಜಿ ಹೇಳಿದರು.

ಅವರು ಪಟ್ಟಣ ಸಮೀಪದ ಹರ್ತಿ ಗ್ರಾಮದಲ್ಲಿ 12 ದಿನಗಳ ಕಾಲ ನಡೆದ ವಚನ ದರ್ಶನ ಪ್ರವಚನದ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ಈ ನಾಡಿನಲ್ಲಿನ ಸಂತರು, ಶರಣರು ಸಂಪತ್ತಿನ ಜೀವನಕ್ಕಿಂತ ಸಂತೃಪ್ತ ಜೀವನ ನಡೆಸಿದರು. ಈ ನಿಟ್ಟಿನಲ್ಲಿ ನಾವೆಲ್ಲರೂ ಸಂಪತ್ತಿನ ಬೆನ್ನು ಹತ್ತಿ ಸಂತೃಪ್ತಿಯ ಬದುಕನ್ನು ಮರೆಯುತ್ತಿದ್ದು, ಬದುಕನ್ನು ಹಾಳು ಮಾಡಿಕೊಳ್ಳುತ್ತಿದ್ದೇವೆ. ಜೀವನದಲ್ಲಿ ಪರೋಪಕಾರದಿಂದ ಬಾಳಿದಾಗ ಬದುಕು ಹಸನಾಗುತ್ತದೆ. ಬಸವಣ್ಣವರ ವಚನಗಳನ್ನು ಮಕ್ಕಳಿಗೆ ನಿತ್ಯ ಹೇಳಬೇಕು, ಉತ್ತಮ ಸಂಸ್ಕಾರ, ನಡೆ-ನುಡಿ, ಗುರು-ಹಿರಿಯರಿಗೆ ಗೌರವ ಕೊಡುವುದನ್ನು ಕಲಿಸಬೇಕು ಎಂದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಪ್ರತಿಯೊಬ್ಬರೂ ಧರ್ಮದ ಹಾದಿಯಲ್ಲಿ ನಡೆಯಬೇಕು. ಇಂದು ಅನ್ಯಾಯ, ಅತ್ಯಾಚಾರ ಹೆಚ್ಚಾಗಲು ನಾವೆಲ್ಲರೂ ಧರ್ಮವನ್ನು ಮರೆತಿರುವುದೇ ಕಾರಣವಾಗಿದ್ದು, ಇಂತಹ ಸಂದರ್ಭದಲ್ಲಿ ಪ್ರವಚನಗಳು, ಶರಣರ ಚಿಂತನ-ಮಂಥನಗಳು ತುಂಬಾ ಸಹಕಾರಿ. ಧರ್ಮದ ಹಾದಿಯಲ್ಲಿ ಸಾಗಿದಾಗ ಬದುಕು ಬಂಗಾರವಾಗುತ್ತದೆ ಎಂದರು.

ಹಾವೇರಿ ಹುಕ್ಕೇರಿ ಮಠದ ಸದಾಶಿವ ಮಾಹಾಸ್ವಾಮೀಜಿ, ಹುಬ್ಬಳ್ಳಿ ಶಾಂತಾಶ್ರಮದ ಅಭಿನವ ಸಿದ್ಧಾರೂಢ ಮಾಹಾಸ್ವಾಮೀಜಿ, ತೆಲಸಂಗ ಹಿರೇಮಠದ ವೀರೇಶ್ವರ ದೇವರು, ಅಕ್ಕಿ ಆಲೂರ ಅಭಿನವ ಸಿದ್ಧರಾಮ ಮಾಹಾಸ್ವಾಮೀಜಿ, ಅಪ್ಪಣ್ಣಾ ಇನಾಮತಿ, ಎಸ್.ಸಿ. ಬಡ್ನಿ, ಕೆ.ವಿ. ಹಂಚಿನಾಳ, ವಿಜಯಕುಮಾರ ಗಡ್ಡಿ, ಡಿ.ಕೆ. ಲಕ್ಕಣ್ಣವರ ಇದ್ದರು.

## ವೈಯಕ್ತಿಕ ಶೌಚಾಲಯ ನಿರ್ಮಾಣ: ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ವಚ್ಛ ಭಾರತ ಮಿಷನ್ ಯೋಜನೆ(ನಗರ) 2.0 ಯೋಜನೆಯಡಿಯಲ್ಲಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ರೋಣ ಪುರಸಭೆಗೆ ಒಟ್ಟು 70 ವೈಯಕ್ತಿಕ ಶೌಚಾಲಯ ಗುರಿಯನ್ನು ನಿಗದಿಪಡಿಸಲಾಗಿದೆ. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ-30 , ಹಾಗೂ ಇತರೆ ಬಡ ಜನರಿಗೆ-32, ವಿಕಲ ಚೇತನರಿಗೆ-08 ವೈಯಕ್ತಿಕ ಶೌಚಾಲಯವನ್ನು ನಿಗದಿಪಡಿಸಲಾಗಿದ್ದು, ರೋಣ ಪುರಸಭೆ ವ್ಯಾಪ್ತಿಯಲ್ಲಿ ವೈಯಕ್ತಿಕ ಶೌಚಾಲಯಗಳನ್ನು ಹೊಂದದೆ ಇರುವ ಹಾಗೂ ಈ ಹಿಂದೆ ವೈಯಕ್ತಿಕ ಶೌಚಾಲಯಕ್ಕೆ ಪುರಸಭೆಯಿಂದ ಯಾವುದೇ ಅನುದಾನ ಪಡೆಯದೆ ಇರುವ ಫಲಾನುಭವಿಗಳು ತಮ್ಮ ಸ್ವಂತ ಜಾಗದಲ್ಲಿ ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಳ್ಳಲು ಸಹಾಯಧನಕ್ಕಾಗಿ ಪರಿಶಿಷ್ಟ ಜಾತಿ-30 , ಪರಿಶಿಷ್ಟ ಪಂಗಡದವರಿಗೆ ಹಾಗೂ ಇತರೆ ಬಡಜನರಿಗೆ – 32 , ವಿಕಲ ಚೇತನರಿಗೆ-08 , ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಳ್ಳಲು ಒಟ್ಟು 70 ಅರ್ಜಿಗಳನ್ನು ಆಹ್ವಾನಿಸಲಾಗಿದೆ,

ಅರ್ಜಿಗಳನ್ನು ಜನವರಿ 23 ರೊಳಗಾಗಿ ಕಚೇರಿಯ ವೇಳೆಯಲ್ಲಿ ರೋಣ ಪುರಸಭೆ ಕಾರ್ಯಾಲಯಕ್ಕೆ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಬೇಕಾಗುವ ದಾಖಲೆಗಳನ್ನು ಕಚೇರಿಯ ನೋಟಿಸ್ ಬೋರ್ಡ್‌ಗೆ ಪ್ರಚುರಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ರೋಣ ಪುರಸಭೆ ಕಾರ್ಯಾಲಯದಲ್ಲಿ ಸಂಪರ್ಕಿಸಬಹುದಾಗಿದೆ.


### ಬೆಳಗಾವಿಯಲ್ಲಿ ಜ.21ರಂದು ಜರುಗಲಿರುವ ಬೃಹತ್ ಕಾಂಗ್ರೆಸ್ ಸಮಾವೇಶದ ಹಿನ್ನೆಲೆ

# ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಬೆಳಗಾವಿಯ ಸಿ.ಪಿ.ಎಡ್. ವೈದಾನದಲ್ಲಿ 'ಗಾಂಧಿ ಭಾರತ' ಸ್ಮರಣಾರ್ಥ ಜೈ ಬಾಪು, ಜೈ ಭೀಮ್ ಮತ್ತು ಜೈ ಸಂವಿಧಾನ ಅಭಿಯಾನ ಮುಂದುವರೆಸುವ ಸಲುವಾಗಿ ಜ. 21ರಂದು ಹಮ್ಮಿಕೊಂಡಿರುವ 'ಬೃಹತ್ ಕಾಂಗ್ರೆಸ್ ಸಮಾವೇಶ'ದ ಅಂಗವಾಗಿ ನಗರದ ಕಾಟನ್ ಸೇಲ್ ಸೊಸೈಟಿಯಲ್ಲಿ ಜ. 17ರಂದು ಸಂಜೆ 4.30ಕ್ಕೆ ಪೂರ್ವಭಾವಿ ಸಭೆ ಜರುಗಲಿದೆ.

ಗದಗ ಜಿಲ್ಲಾ ಕಾಂಗ್ರೆಸ್ ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯತ್, ತಾ.ಪಂ, ಗ್ರಾ.ಪಂ, ಎಪಿಎಂಸಿ ಪಕ್ಷದ ಅಧ್ಯಕ್ಷರು-ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು-ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.



ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ ಅವರ ನೇತೃತ್ವದ ಈ ಪೂರ್ವಭಾವಿ ಸಭೆಯಲ್ಲಿ ಕಾನೂನು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಎಐಸಿಸಿ ಕಾರ್ಯದರ್ಶಿ ಮಯೂರ ಜಯಕುಮಾರ, ಕೆಪಿಸಿಸಿ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ, ಗದಗ ಜಿಲ್ಲಾ ಕೆಪಿಸಿಸಿ ವೀಕ್ಷಕರಾದ ಎಮ್.ಬಿ. ಸೌದಾಗಾರ, ಮೋಹನ್ ಅಸುಂಡಿ ಹಾಗೂ ಐತಿಹಾಸಿಕ ಸಮಾವೇಶವನ್ನು ಯಶಸ್ವಿಗೊಳಿಸಲು ಕಿತ್ತೂರ ಕರ್ನಾಟಕ ವಿಭಾಗದ ವ್ಯಾಪ್ತಿಯಲ್ಲಿ ಬರುವ ವಿಧಾನಸಭಾ ಕ್ಷೇತ್ರಗಳಿಗೆ ಉಸ್ತುವಾರಿಗಳನ್ನಾಗಿ ನೇಮಿಸಿದ ಬಿ.ಜಿ. ಗೋವಿಂದಪ್ಪ, ಟಿ. ರಘುಮೂರ್ತಿ, ಡಾ. ಶ್ರೀನಿವಾಸ್ ಎನ್.ಟಿ., ಗದಗ ಜಿಲ್ಲೆಯ ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ಬಿ.ಆರ್. ಯಾವಗಲ್, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಸೇರಿ ಸಭೆಯಲ್ಲಿ ಕೆಪಿಸಿಸಿ ಉಸ್ತುವಾರಿಗಳು ಹಾಗೂ ಮಾಜಿ ಶಾಸಕರು ಪಾಲ್ಗೊಳ್ಳುವರು.

## ಸಾಕ್ಷಿ ಸುಭಾಷಿತ

**ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ ಹೃದಯದಿಂದ ಕೇಳಿಸಿಕೊಳ್ಳಿ**

**–ಸುಭಾಷಿತ**

## ಸಂಪಾದಕೀಯ

# ಆಡಳಿತದ ಮೇಲೆ ಕರಿನೆರಳು

ರಾಜ್ಯ ರಾಜಕಾರಣದಲ್ಲಿ ಮತ್ತೊಮ್ಮೆ ಅಧಿಕಾರ ಹಂಚಿಕೆ ಮತ್ತು ಅಧಿಕಾರ ಹಸ್ತಾಂತರದ ಚರ್ಚೆ ತಾರಕಕ್ಕೆ ಏರಿದೆ. ರಾಜ್ಯದ ಮೂರು ಪಕ್ಷಗಳಲ್ಲಿಯೂ ಈಗ ರಾಜ್ಯಾಧ್ಯಕ್ಷರ ಬದಲಾವಣೆ ಚರ್ಚೆ ನಡೆಯುತ್ತಿದೆ. ಅದರಲ್ಲೂ ಆಡಳಿತಾರೂಢ ಕಾಂಗ್ರೆಸ್ ಪಕ್ಷದ ರಾಜ್ಯಾಧ್ಯಕ್ಷರ ಆಯ್ಕೆ ಸುದ್ದಿ ಬಹು ಚರ್ಚೆಗೆ ಕಾರಣವಾಗಿದೆ.

ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅಧಿಕಾರ ಅವಧಿ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಕೆಪಿಸಿಸಿ ನೂತನ ಸಾರಥಿಯ ನಿರೀಕ್ಷೆಯಲ್ಲಿದೆ. ಈ ಬೆಳವಣಿಗೆಗಳ ನಡೆದಿರುವ ಮಧ್ಯೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮತ್ತು ಡಿಕೆ ಶಿವಕುಮಾರ್ ಮಧ್ಯೆ ವಾಕ್ ಸಮರ ಶುರುವಾಗಿರುವುದು ಕಾಂಗ್ರೆಸ್ ಪಕ್ಷದಲ್ಲಿ ಸಂಚಲನ ಸೃಷ್ಟಿಯಾಗಿದೆ.

ಈ ಇಬ್ಬರ ನಡುವಿನ ಮಾತಿನ ಸಂಘರ್ಷ ಹೈಕಮಾಂಡ್ ಅಂಗಳಕ್ಕೆ ತಲುಪಿದೆ. ಕರ್ನಾಟಕದ ಉಸ್ತುವಾರಿ ಸುರ್ಜೇವಾಲಾ, ಈ ಕುರಿತು ಸಭೆ ನಡೆಸಿ ಪಕ್ಷದ ಶಿಸ್ತು ಉಲ್ಲಂಘನೆ ಆಗದಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಪಕ್ಷದ ರಾಜ್ಯಾಧ್ಯಕ್ಷರ ಹುದ್ದೆ ಮತ್ತು ಮುಖ್ಯಮಂತ್ರಿ ಬದಲಾವಣೆಯ ವಿಚಾರವನ್ನು ಯಾರೊಬ್ಬರೂ ಮಾಧ್ಯಮಗಳ ಮುಂದೆ ಪ್ರಸ್ತಾಪಿಸದಂತೆ ಕಟ್ಟೆಚ್ಚರಿಕೆ ನೀಡಿದ ನಂತರವೂ ಇಬ್ಬರು ನಾಯಕರು ಪರಸ್ಪರ ಪರೋಕ್ಷವಾಗಿ ಸವಾಲು ಎಸೆಯುವ ರೀತಿಯಲ್ಲಿ ಹೇಳಿಕೆಗಳನ್ನ ನೀಡಿದ್ದಾರೆ.

ಇದೆಲ್ಲವನ್ನ ಸೂಕ್ಷ್ಮವಾಗಿ ಗಮನಿಸಿರುವ ಹೈಕಮಾಂಡ್ ಮತ್ತೊಂದು ಸುತ್ತಿನ ಸಭೆ ನಡೆಸಲು ನಿರ್ಧರಿಸಿದೆ. ಎಐಸಿಸಿ ಅಧ್ಯಕ್ಷರೂ ಕರ್ನಾಟಕದವರೇ ಆಗಿರುವುದರಿಂದ ಕರ್ನಾಟಕದ ಕಾಂಗ್ರೆಸ್ ಗೊಂದಲವನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಇದೆಲ್ಲದರ ಒಟ್ಟು ಪರಿಣಾಮ ರಾಜ್ಯದ ಆಡಳಿತದ ಮೇಲೆ ಬಿದ್ದಿದೆ. ಒಂದು ಕಡೆ ರಾಜ್ಯದ 11 ಸಚಿವರ ಕಾರ್ಯವೈಖರಿಯ ಬಗ್ಗೆ ಅಸಮಾಧಾನ, ಗ್ಯಾರಂಟಿ ಕಾರ್ಯಕ್ರಮಗಳಿಗೆ ಅನುದಾನ ಹಂಚಿಕೆಯ ಸವಾಲು ಎದುರಿಸುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ಈಗ ಅಧಿಕಾರದ ವಿಷಯ ವಿಷಮ ಘಳಿಗೆಯನ್ನು ಸೃಷ್ಟಿಸಿದೆ.

ರಾಜ್ಯದ ಜನ ಕೊಟ್ಟಿರುವ ಈ ಅಧಿಕಾರವನ್ನು ಕಾಂಗ್ರೆಸ್ ತನ್ನ ಆಂತರಿಕ ಕಚ್ಚಾಟಗಳ ಮೂಲಕ ಕಳೆದುಕೊಳ್ಳುವ ಸ್ಥಿತಿಗೆ ಹೋಗುವ ಮುನ್ನ, ಜನರ ಭಾವನೆಗಳನ್ನು ಅರ್ಥ ಮಾಡಿಕೊಂಡು ಸುಸ್ಥಿರ ಆಡಳಿತ ನೀಡುವತ್ತ ಗಮನಹರಿಸಲಿ.

## ಕನ್ನಡ-ಕನ್ನಡ ಎನ್ನುತ ಎದೆ ಎದೆ ಬಡಿದುಕೊಳ್ಳುವ ಸ್ಥಿತಿ ಎದುರಾಗಿದ್ದು ದುರಂತ

# ಕನ್ನಡ-ಕನ್ನಡ ಎಂಬ ಬಿಕ್ಕಳಿಕೆ ಇನ್ನೂ ನಿಲ್ಲುತ್ತಿಲ್ಲ!

ಕನ್ನಡ ಸಾಹಿತ್ಯ ಪರಿಷತ್ತು ಈಗಾಗಲೇ ಶತಮಾನೋತ್ಸವ ಆಚರಿಸಿಕೊಂಡು ಮುನ್ನಡೆಯುತ್ತಿರುವುದು ಕನ್ನಡಿಗರ ಹೆಮ್ಮೆ. ಕನ್ನಡಿಗರನ್ನು ಒಗ್ಗೂಡಿಸಿ ಕರ್ನಾಟಕ ಏಕೀಕರಣಕ್ಕೆ ಬೆವರು ಹರಿಸಿದ ಅನೇಕ ಹೋರಾಟಗಾರರು, ಮಹಾತ್ಮರ ಫಲ ಇಂದು ನಾವು ಕನ್ನಡ ಲೋಕವನ್ನು ಪ್ರವೇಶಿಸಲು ಸಾಧ್ಯವಾಗಿದೆ. ಇದರ ಸುವರ್ಣ ಸಂಭ್ರಮವನ್ನು ನಾವು ಇತ್ತೀಚೆಗೆ ಆಚರಿಸಿದ್ದು, ಅದೊಂದು ಕನ್ನಡದ ಸುಗ್ಗಿಯಂತಿತ್ತು. ಸಹಸ್ರಾರು ವರ್ಷಗಳ ಐತಿಹ್ಯ ಹೊಂದಿದ ಕನ್ನಡ ಸಾಹಿತ್ಯಕ್ಕೆ ತನ್ನದೇ ಆದ ಸ್ಥಾನಮಾನವಿದೆ. ಎಂಟು ಜ್ಞಾನಪೀಠ ಪ್ರಶಸ್ತಿಯನ್ನು ಪಡೆದ ಹಿರಿಮೆ ನಮ್ಮ ಕನ್ನಡ ಭಾಷೆಯಿದ್ದು.

ವರ್ಷಕ್ಕೊಮ್ಮೆ ಆಯ್ದ ಜಿಲ್ಲೆಗಳಲ್ಲಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜನೆ ಮಾಡುವುದು ಅದೊಂದು ಸಡಗರ-ಸಂಭ್ರಮ ಹಬ್ಬವೇ ಸರಿ. ಲಕ್ಷ-ಲಕ್ಷ ಕನ್ನಡದ ಮನಸ್ಸುಗಳನ್ನು ಒಂದೆಡೆ ಸೇರಿಸಿ ಮನಸ್ಸು-ಮನಸ್ಸು ಬೆಸೆಯುವ ವೇದಿಕೆಯೂ ಹೌದು. ಕನ್ನಡ ಪರ ಚಿಂತನೆ ಮಾಡುವ ಸದುದ್ದೇಶವೇ ಸಮ್ಮೇಳನಗಳ ಮೂಲ ಉದ್ದೇಶ. ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನಗಳು ನಮ್ಮಲ್ಲಿ ನಡೆಯುತ್ತಾ ಬಂದಿರುವುದು ತಾಯಿ ಭುವನೇಶ್ವರಿಗೆ ನೀಡುವ ಗೌರವ ಎಂದೇ ಹೇಳಬೇಕು.

ಆದಾಗ್ಯೂ ಕನ್ನಡ-ಕನ್ನಡ ಎಂಬ ಬಿಕ್ಕಳಿಕೆ ಇನ್ನೂ ನಿಲ್ಲುತ್ತಿಲ್ಲ! ಕನ್ನಡದ ಸಮಸ್ತ ಅಭಿವೃದ್ಧಿಗಾಗಿ ಕನ್ನಡ ಸಾಹಿತ್ಯ ಪರಿಷತ್ತು ಜನ್ಮತಾಳಿ ನೂರು ವಸಂತಗಳೇ ಉರುಳಿವೆ.



ಇದಕ್ಕೆ ಪೂರಕ ಎಂಬಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಪುಸ್ತಕ ಪ್ರಾಧಿಕಾರ, ಮುಂತಾದ ಕನ್ನಡ ಪರ ಸಂಘಟನೆಗಳು ಕನ್ನಡ ಅಭಿವೃದ್ಧಿಗಾಗಿ ಮಾಡುವ ಹೋರಾಟ ಚಿಂತನೆ ವ್ಯಾಪಕವಾಗಿ ನಡೆಯುತ್ತಿರುವುದನ್ನು ನಾವು ಮೆಚ್ಚಲೇಬೇಕು.

ಇಷ್ಟಾದರೂ ಕನ್ನಡ ಕಡ್ಡಾಯವಾಗಿರಲಿ, ಕನ್ನಡಕ್ಕೆ ಕೈ ಎತ್ತಿ, ಕನ್ನಡವೇ ಉಸಿರು ಎಂದೆಲ್ಲ ಹೇಳುತ್ತ ಕನ್ನಡ-ಕನ್ನಡ ಎನ್ನುತ ಎದೆ ಎದೆ ಬಡಿದುಕೊಳ್ಳುವ ಸ್ಥಿತಿ ಎದುರಾಗಿದ್ದು ಸದ್ಯ ನೋಡುತ್ತಿದ್ದೇವೆ. ಕನ್ನಡ-ಕನ್ನಡ ಎನ್ನುವ ಬಿಕ್ಕಳಿಕೆ ಇಂದಿಗೂ ನಿಲ್ಲುತ್ತಿಲ್ಲ ಯಾಕೆ ಎಂಬುದೇ ಯಕ್ಷ ಪ್ರಶ್ನೆ. ಹಳೆಗನ್ನಡ, ನಡುಗನ್ನಡ, ಹೊಸಗನ್ನಡ ಹೀಗೆ ಕನ್ನಡ ಸಾಹಿತ್ಯದ ಕೃಷಿ, ಕಾಲ-ಕಾಲಕ್ಕೆ ನಿರಂತರವಾಗಿ ನಡೆಯುತ್ತಾ ಇದೆ. ಹೆಚ್ಚಿನ ಜ್ಞಾನಾರ್ಜನೆಗಾಗಿ ರಾಮಾಯಣ, ಮಹಾಭಾರತ, ಭಗವದ್ಗೀತೆ, ಗೀತಾಂಜಲಿ, ಬೈಬಲ್, ಕುರ್‌ಆನ್ ಎಂಬ ಮಹಾಕಾವ್ಯಗಳು ನಮ್ಮನ್ನು ಬಡಿದೆಬ್ಬಿಸಿ ಮನುಷ್ಯತ್ವದ ಹಾದಿಗೆ ಕೊಂಡೊಯ್ಯುವ ಅಸ್ತ್ರಗಳಾಗಿವೆ. ಸಾಲದೆಂಬಂತೆ ನಮ್ಮನ್ನು ಜಾಗೃತಿಗೊಳಿಸಲು ಈಗಿನ ಮಹಾನ್ ವಿದ್ವಾಂಸರು ಪಂಡಿತರು, ಸಾಹಿತಿಗಳು ಬರೆದ ಕನ್ನಡದ ಪುಸ್ತಕಗಳು ಲಕ್ಷ-ಲಕ್ಷ ಇವೆಯಾದರೂ ಕನ್ನಡ-ಕನ್ನಡ ಎಂಬ ಬಿಕ್ಕಳಿಕೆ ಇನ್ನೂ ನಿಲ್ಲುತ್ತಿಲ್ಲ ಯಾಕೆ?


ಕರ್ನಾಟಕ ಘನ ಸರ್ಕಾರ ಕೂಡಾ ಕನ್ನಡ ಪರ ಚಿಂತನೆಗಾಗಿ ಪ್ರಾಥಮಿಕ ಹಂತದಲ್ಲಿ ಮಕ್ಕಳಿಗೆ ಕನ್ನಡ ಕಡ್ಡಾಯ ಎನ್ನುತ್ತಿವೆ. ಕನ್ನಡದಲ್ಲೇ ವ್ಯವಹರಿಸಿ, ಕನ್ನಡವನ್ನೇ ಮಾತನಾಡಿ, ಸರಕಾರಿ ಕಛೇರಿಗಳಲ್ಲಿ ಕನ್ನಡ ಭಾಷೆ ಕಡ್ಡಾಯ ಎಂಬುದನ್ನು ಹೇಳಲು ಮರೆಯುವುದಿಲ್ಲ ನಾವು. ಅಂಗಡಿ ಮುಗ್ಗಟ್ಟುಗಳ ನಾಮಫಲಕ ಆಂಗ್ಲ ಭಾಷೆಯಲ್ಲಿ ಬರೆದಿದ್ದರೆ, ಅವುಗಳಿಗೆ ಕಪ್ಪು ಮಸಿ ಬಳೆದು ಎಚ್ಚರಿಸುವ ಕೆಲಸಗಳು ನಿರಂತರವಾಗಿ ನಡೆಯುತ್ತಾ ಇವೆ. ಆದರೂ ಕನ್ನಡ- ಕನ್ನಡ ಎಂಬ ಬಿಕ್ಕಳಿಕೆ ನಿಲ್ಲುತ್ತಿಲ್ಲ ಯಾಕೆ?

ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯುವಾಗ ಕನ್ನಡ ಪರ ಚಿಂತನೆ ಮಾಡಿ ತೆಗೆದುಕೊಳ್ಳುವ ನಿರ್ಧಾರಗಳು ಎಲ್ಲಿ ಮಾಯವಾಗುತ್ತಿವೆ. ಜಿಲ್ಲಾ, ತಾಲೂಕು ಮಟ್ಟಗಳಲ್ಲಿ ನಡೆಯುವ ಕನ್ನಡ ಪರ ಚಿಂತನೆ ತೆಗೆದುಕೊಳ್ಳುವ ನಿರ್ಧಾರ ಇಂದಿಗೂ ಚಿಂತಾಜನಕವಾಗಿಯೇ ಉಳಿಯುತ್ತಿವೆ. ಕನ್ನಡ ಕಾಯಲು ಕನ್ನಡ ಕಾವಲು ಸಮಿತಿಗಳೂ ಇವೆ. ಆದಾಗ್ಯೂ ಇಂಗ್ಲೀಷ ವ್ಯಾಮೋಹದಲ್ಲಿ ಸಿಲುಕಿ ಕನ್ನಡ ನರಳುವಂತಾಗಿದ್ದು ಈ ವಾಸ್ತವ ಕಣ್ಮುಂದೆ ಬಂದು ನಿಲ್ಲುತ್ತದೆ.

ಕನ್ನಡ ತಾಯಿಯ ತೇರು ಎಳೆಯಲು ಪೂರ್ಣ ಪ್ರಮಾಣವಾಗಿ ಕಾರ್ಯ ಮಾಡಬೇಕಾಗುತ್ತದೆ. ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಸರಕಾರಿ ನೌಕರಿ ಮಾಡುವ ಅನೇಕರು ಕನ್ನಡ ಸಾಹಿತ್ಯ ಪರಿಷತ್ತಿನ ಸಾರಥ್ಯ ವಹಿಸಿಕೊಂಡಿರುವುದು ಕಂಡು ಬರುತ್ತದೆ. ಅದರಲ್ಲಿ ಶಿಕ್ಷಕ ಬಳಗ ಹೆಚ್ಚಾಗಿ ಇರುವುದನ್ನು ಕಾಣುತ್ತೇವೆ. ಸರಕಾರಿ ನೌಕರರು ಕನ್ನಡ ತಾಯಿ ಸೇವೆ ಮಾಡಲಿ. ಆದರೆ ಇಡೀ ಜವಾಬ್ದಾರಿಯನ್ನು ಹೊತ್ತುಕೊಳ್ಳುವುದು ತುಂಬಾ ಕಷ್ಟ. ಈ ಅಂಶವನ್ನು ನಾವು ಸೂಕ್ಷ್ಮವಾಗಿ, ಗಂಭೀರವಾಗಿ ಗಮನಿಸಲಾಗಿ ಸರಕಾರಿ ನೌಕರಿ ಮಾಡುವರು ತಮ್ಮ ಮೂಲ ವೃತ್ತಿಗೆ ನ್ಯಾಯ ನೀಡಲೂ ಆಗದೆ, ಕನ್ನಡ ಸಾಹಿತ್ಯ ಪರಿಷತ್ತಿಗೂ ಪರಿಪೂರ್ಣ ಸೇವೆ ಮಾಡಲಾಗದೆ ಇಕ್ಕಟ್ಟಿನಲ್ಲಿ ಸಿಲುಕಬೇಕಾಗುತ್ತದೆ.

ಈ ನಿಟ್ಟಿನಲ್ಲಿ ಕೇಂದ್ರ ಸಮಿತಿ ಗಂಭೀರವಾದ ಚಿಂತನೆ ಮಾಡಿದರೆ ಕನ್ನಡ-ಕನ್ನಡ ಎಂಬ ಬಿಕ್ಕಳಿಕೆ ಸ್ವಲ್ಪ ಮಟ್ಟಿಗಾದರೂ ನಿಲ್ಲಬಹುದು. ಕನ್ನಡ ಸಾಹಿತ್ಯ ಪರಿಷತ್ತಿನ ಸಾರಥ್ಯವನ್ನು ನಿವೃತ್ತಿ ಹೊಂದಿದವರಿಗೆ ಅಥವಾ ಅರ್ಹತೆ ಇದ್ದವರಿಗೆ ನೀಡಿದರೆ ಅದೊಂದು ಒಳ್ಳೆಯ ಬೆಳವಣಿಗೆ ಎನಿಸುವುದು. ಈ ನಿಟ್ಟಿನಲ್ಲಿ ಕ್ರಮ ಜರುಗಿಸುವ ಅಗತ್ಯವಿದೆ. ಈ ಬಗ್ಗೆ ಸಂಬಂಧಿಸಿದ ಮುಖ್ಯಮಂತ್ರಿಗಳು, ಸಚಿವರು, ಶಾಸಕರು, ಕನ್ನಡಪರ ಚಿಂತಕರು, ಚಿಂತನೆ ಮಾಡುವ ಅಗತ್ಯ ಇದೆ. ಕನ್ನಡಕ್ಕಾಗಿ ಕೈ ಎತ್ತಿ ಎಂಬ ಮಾತಿಗೆ ಅರ್ಥ ಬರಬೇಕೆಂದರೆ ಪ್ರತಿಯೊಬ್ಬರೂ ಇಚ್ಛಾಶಕ್ತಿ ಮತ್ತು ಮಾತೃಭಾಷೆ ಅಭಿಮಾನ ಹೊಂದಿದರೆ ಸಾಕು.

ಅದೇನೆ ಇರಲಿ ನಾವೆಲ್ಲರೂ ಕನ್ನಡ ತಾಯಿಯ ಏಕ ಕುಟುಂಬದ ಮಕ್ಕಳು. 2025 ಜನೇವರಿ 20 ಮತ್ತು 21ರಂದು ಕೋಟೆನಾಡು ಗಜೇಂದ್ರಗಡದಲ್ಲಿ 10ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಆಯೋಜನೆ ಮಾಡಲಾಗಿದ್ದು, ಈ ಸಮ್ಮೇಳನಗಳಲ್ಲಿ ಕನ್ನಡದ ಮನಸ್ಸುಗಳು ಪಾಲ್ಗೊಳ್ಳುವ ಮೂಲಕ ಸಮ್ಮೇಳನದ ಯಶಸ್ವಿಗೆ ಸಾಕ್ಷಿಯಾಗಬೇಕೆಂಬುದೇ ನಮ್ಮ ಹಿರಿದಾಶೆ.



– ಐ.ಕೆ. ಕಮ್ಮಾರ.
ಸಾಹಿತಿಗಳು, ಗದಗ.

# ಯೋಗದಿಂದ ರೋಗ ಮುಕ್ತ ಜೀವನ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರತಿನಿತ್ಯ ಯೋಗ ಮಾಡುವುದರಿಂದ ರೋಗ ಮುಕ್ತ ಜೀವನ ಸಾಧ್ಯ ಎಂದು ಎಂ.ಎಂ. ಕೊಪ್ಪಳ ಹೇಳಿದರು.

ಪಟ್ಟಣ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆಯ ವಿದ್ಯಾರ್ಥಿ ಹರ್ಷವರ್ಧನ ಕೊಲ್ಲಾರಿ ಗೊಕಾಕದಲ್ಲಿ ಕರ್ನಾಟಕ ಸ್ಟೇಟ್ ಅಮೆಚೂರ್ ಸ್ಪೋರ್ಟ್ಸ್ ಅಸೋಸಿಯೇಶನ್ ಹಾಗೂ ಸತೀಶ ಜಾರಕಿಹೊಳಿ ಫೌಂಡೇಶನ್ ಸಂಯುಕ್ತ ಆಶ್ರಯದಲ್ಲಿ ಜರುಗಿದ ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಯನ್ನು ಸನ್ಮಾನಿಸಿ ಮಾತನಾಡಿ, ಪ್ರಾಥಮಿಕ ಹಂತದಲ್ಲಿ ಮಕ್ಕಳು ನಿತ್ಯ ಯೋಗಾಸನ ಮಾಡಬೇಕು. ಇದರಿಂದ ದೈಹಿಕ-ಮಾನಸಿಕವಾಗಿ ಸದೃಢರಾಗಲು ಸಹಾಯಕವಾಗುತ್ತದೆ ಎಂದರು.

ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡ್ರ, ಎಂ.ಎಂ. ಮೇಗಲಮನಿ, ಕೆ.ಎಂ. ಹೆರಕಲ್ಲ, ಮಂಜುನಾಥ ಕಲ್ಯಾಣಮಠ, ಎಸ್.ಎಚ್. ಉಪ್ಪಾರ, ಎಚ್.ಆರ್. ಬಜೆಂತ್ರಿ, ಎಸ್.ವಿ. ಹಿರೇಮಠ, ವಿ.ಎಂ. ಕಂಠಿ, ಟಿ.ವೀಣಾ, ಎಸ್.ಡಿ. ಪಂಡಿತ, ನಂದಾ ಮಟ್ಟಿ, ಜ್ಯೋತಿ ಜಾಧವ, ಪವಿತ್ರಾ ಮಟ್ಟಿ, ರೇಣುಕಾ ಪರ್ವತಗೌಡ್ರ ಇದ್ದರು.

## ವಿವಿಧ ಇಲಾಖೆಗಳ ಗ್ರೂಪ್ 'ಬಿ' ವೃಂದದ ಹುದ್ದೆಗಳ ಪರೀಕ್ಷೆ ಕುರಿತು ಪೂರ್ವಭಾವಿ ಸಭೆ

# ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ನಡೆಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಕರ್ನಾಟಕ ಲೋಕಸೇವಾ ಆಯೋಗವು ವಿವಿಧ ಇಲಾಖೆಗಳ ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಜ.19 ಮತ್ತು 25ರಂದು ಪರೀಕ್ಷೆಗಳನ್ನು ನಡೆಸುತ್ತಿದೆ. ಜಿಲ್ಲೆಯಲ್ಲಿ ಪರೀಕ್ಷೆಗಳು ಸುವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ಜರುಗಿಸಬೇಕು ಹಾಗೂ ಪರೀಕ್ಷಾ ಅಕ್ರಮಕ್ಕೆ ಅವಕಾಶ ಇಲ್ಲ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರನ್ನು, ಸ್ಥಳೀಯ ನಿರೀಕ್ಷಣಾಧಿಕಾರಿಯನ್ನು, ಮಾರ್ಗಾಧಿಕಾರಿಗಳನ್ನು ಮತ್ತು ತ್ರಿಸದಸ್ಯ ಸಮಿತಿಯನ್ನು ನೇಮಿಸಲಾಗಿದೆ. ಅಧಿಕಾರಿಗಳು ತಮಗೆ ನಿಗದಿಪಡಿಸಿದ ಕರ್ತವ್ಯಗಳನ್ನು ನಿರ್ವಹಿಸಬೇಕು. ವಿಕಲಚೇತನರಿಗೆ ನೆಲಮಹಡಿಯ ಪರೀಕ್ಷಾ ಕೇಂದ್ರಗಳಲ್ಲಿಯೇ ಪರೀಕ್ಷೆ ಬರೆಯುವ ವ್ಯವಸ್ಥೆಯಾಗಬೇಕು. ಒಟ್ಟಾರೆ ಯಾವುದೇ ಅಕ್ರಮ, ಲೋಪ ದೋಷಗಳಿಗೆ ಆಸ್ಪದವಿಲ್ಲದಂತೆ ಪರೀಕ್ಷೆಯನ್ನು ಯಶಸ್ವಿಯಾಗಿ ಜರುಗಿಸಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಜ. 19ರಂದು ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಹಾಗೂ ಜ. 25ರಂದು ಮಧ್ಯಾಹ್ನ 1 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.





ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶದ ಝರಾ-ಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದು ಮಾಡಲು ಆದೇಶಿಸಿದೆ. ಗುರುತು ಪತ್ತೆ ಹಚ್ಚಲು ಸಾಧ್ಯವಾಗದ ರೀತಿಯಲ್ಲಿ ವಸ್ತ್ರ ಧರಿಸಿ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದಲ್ಲಿ ಫ್ರಿಸ್ಕಿಂಗ್ ನಡೆಸುವ ಸಿಬ್ಬಂದಿಯೊಂದಿಗೆ ಮತ್ತು ಪರೀಕ್ರಾ ಕೊಠಡಿಯ ಸಂವೀಕ್ಷಕರೊಂದಿಗೆ ಸಹಕರಿಸಿ ತಪಾಸಣೆಗೊಳಗಾಗುವುದು ಕಡ್ಡಾಯವಾಗಿರುತ್ತದೆ.

ಶೂ-ಸಾಕ್ಸ್‌ಗಳನ್ನು ಧರಿಸಲು ಅವಕಾಶವಿರುವುದಿಲ್ಲ. ಸಾಧಾರಣ ಚಪ್ಪಲಿಯನ್ನು ಧರಿಸಿ ಪರೀಕ್ಷೆಗೆ ಹಾಜರಾಗಬೇಕು. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯೊಳಗೆ ಯಾವುದೇ ಆಧುನಿಕ ಉಪಕರಣಗಳು, ಮೊಬೈಲ್ ಬ್ಲೂಟೂತ್, ಕ್ಯಾಲ್ಕುಲೇಟರ್, ವೈಟ್‌ಫ್ಲುಡ್, ವೈರ್‌ಲೆಸ್ ಸೆಟ್ಸ್, ಪೇಪರ್, ಬುಕ್ಸ್‌ಗಳನ್ನು ತೆಗೆದು-ಕೊಂಡು ಹೋಗಲು ಅವಕಾಶ ಇರುವುದಿಲ್ಲ. ತುಂಬು ತೋಳಿನ ಶರ್ಟ್ ಮತ್ತು ಯಾವುದೇ ಆಭರಣಗಳನ್ನು ಮೆಟಲ್ ಮತ್ತು ನಾನ್‌ಮೆಟಲ್ (ಮಂಗಳಸೂತ್ರ ಹಾಗೂ ಕಾಲುಂಗುರಗಳನ್ನು ಹೊರತುಪಡಿಸಿ)ಪುಲ್ಲೋವರ್ಸ್, ಜಾಕೆಟ್, ಸ್ವೆಟರ್‌ಗಳನ್ನು ಧರಿಸಿ ಹಾಜರಾಗುವುದನ್ನು ನಿಷೇಧಿಸಲಾಗಿದೆ.

ಹಿಯರಿಂಗ್ ಏಡ್ ಉಪಕರಣ ಧರಿಸಿರುವ ಅಭ್ಯರ್ಥಿಗಳು ವೈದ್ಯಕೀಯ ದಾಖಲೆಗಳೊಂದಿಗೆ ಪರೀಕ್ಷೆ ಆರಂಭವಾಗುವ ಎರಡು ಗಂಟೆ ಮುಂಚಿತವಾಗಿ ಸಂಪೂರ್ಣ ವಿಶೇಷ ತಪಾಸಣೆಗೆ ಒಳಪಡುವುದು ಕಡ್ಡಾಯವಾಗಿದೆ. ಪ್ರವೇಶ ಪತ್ರದಲ್ಲಿ ತಿಳಿಸಿರುವ ವಸ್ತ್ರ ಸಂಹಿತೆ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

### ಜಿಲ್ಲೆಯ 9 ಪರೀಕ್ಷಾ ಕೇಂದ್ರಗಳ ವಿವರ

ನಗರದ ಕೆ.ಎಲ್.ಇ ಸೊಸೈಟಿಸ್ ಜೆ.ಟಿ. ಕಾಲೇಜ್, ಸಿ.ಎಸ್. ಪಾಟೀಲ ಬಾಲಕರ ಪ್ರೌಢಶಾಲೆ, ಸಿ.ಎಸ್. ಪಾಟೀಲ ಬಾಲಕಿಯರ ಪ್ರೌಢಶಾಲೆ, ವಿ.ಡಿ.ಎಸ್.ಟಿ. ಗಂಡುಮಕ್ಕಳ ಪ್ರೌಢಶಾಲೆ, ವಿ.ಡಿ.ಎಸ್.ಟಿ. ಹೆಣ್ಣುಮಕ್ಕಳ ಸಂಯುಕ್ತ ಪಿ.ಯು. ಕಾಲೇಜ್, ಬೆಟಗೇರಿಯ ಎ.ಎಸ್.ಎಸ್ ಕಾಮರ್ಸ್ ಕಾಲೇಜ್, ನಗರದ ಶಾಸ್ತ್ರೀಜಿ ಹೈಸ್ಕೂಲ್, ಮುಳಗುಂದ ರಸ್ತೆಯಲ್ಲಿನ ಸರಕಾರಿ ಪದವಿಪೂರ್ವ ಕಾಲೇಜ್, ಸಿದ್ದಲಿಂಗನಗರದ ಬಸವೇಶ್ವರ ಪ್ರೌಢಶಾಲೆಗಳು ಪರೀಕ್ಷಾ ಕೇಂದ್ರಗಳಾಗಿವೆ.

ಮೆಟಲ್ ವಾಟರ್ ಬಾಟಲ್ ಮತ್ತು ನಾನ್ ಟ್ರಾನ್ಸಪರಂಟ್ ವಾಟರ್ ಬಾಟಲ್‌ಗಳನ್ನು ಪರೀಕ್ಷಾ ಕೊಠಡಿಯೊಳಗೆ ತೆಗೆದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ. ಕರ್ನಾಟಕ ಲೋಕಸೇವಾ ಆಯೋಗವು ನಿಗದಿಪಡಿಸಿರುವ ಸೂಚನೆಗಳನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಪಾಲಿಸಬೇಕು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಬಿ. ಸಂಕದ ಮಾತನಾಡಿ, ಪರೀಕ್ಷಾ ಕೇಂದ್ರಗಳಲ್ಲಿ ಶಾಂತಿ-ಸುವ್ಯವಸ್ಥೆ, ಪಾರದರ್ಶಕತೆ ಕಾಪಾಡಲು ಪೊಲೀಸ್ ಇಲಾಖೆಯಿಂದ ಸೂಕ್ತ ಬಂದೋಬಸ್ತ್ ಸೇರಿದಂತೆ ಅವಶ್ಯಕ ಕ್ರಮ ಕೈಗೊಳ್ಳಲಾಗುವುದು ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಡಯಟ್ ಪ್ರಾಚಾರ್ಯರಾದ ಜಿ.ಎಲ್. ಬಾರಾಟಕ್ಕೆ, ಖಜಾನೆ ಇಲಾಖೆ ಉಪನಿರ್ದೇಶಕ ಹರಿನಾಥ ಬಾಬು, ಪರೀಕ್ಷಾ ಕೇಂದ್ರದ ಮುಖ್ಯಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಹವಾಮಾನ ಇಲಾಖೆಯ 150ನೇ ವರ್ಷಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಹವಾಮಾನ ಇಲಾಖೆಯ (1875-2025), 150ನೇ ವರ್ಷದ ಸಂಸ್ಥಾಪನಾ ದಿನವನ್ನು ನಗರದ ಹವಾಮಾನ ಇಲಾಖೆಯಲ್ಲಿ ಬುಧವಾರ ಆಚರಿಸಲಾಯಿತು. ನಿವೃತ್ತ ಹವಾಮಾನ ತಜ್ಞ ನಟರಾಜ ಸವಡಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದರು. ಹವಾಮಾನ ಇಲಾಖೆಯ ಪ್ರಭಾರಿ ಅಧಿಕಾರಿ ತಿಪ್ಪಲಕ್ಷ್ಮಿ ಕೆ.ಎಲ್. ಅವರು ಹವಾಮಾನದ ಇಲಾಖೆಯ ಇತಿಹಾಸ ಹಾಗೂ ಕಾರ್ಯನಿರ್ವಹಣೆ ಕುರಿತು ಮಾಹಿತಿ ನೀಡಿದರು.

ಕಚೇರಿಯ ವೈಜ್ಞಾನಿಕ ಸಹಾಯಕರಾದ ಅಮಿತ್ ಕುಮಾರ, ಹೃಷಿಕೇಶ ತಿವಾರಿ, ಪ್ರತೀಕ ದುಬೆ, ಪ್ರದೀಪ, ಸಂಗ್ರಾಮಸಿಂಗ್ ತಾರಾಡೆ, ಎಚ್.ಸಿ. ಕಟ್ಟಿಮನಿ ಹವಾಮಾನ ಇಲಾಖೆಯ ಕೆಲಸದ ಸ್ವರೂಪ ಮತ್ತು ಪ್ರಾಮುಖ್ಯತೆಯ ಬಗ್ಗೆ ವಿವರವಾಗಿ ತಿಳಿಸಿದರು. ಈ ಕಾರ್ಯಕ್ರಮಕ್ಕೆ ಎಸ್‌ವಿಟಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳು ಆಗಮಿಸಿದ್ದರು.

ಇದೇ ಸಂದರ್ಭದಲ್ಲಿ ಸಿಬ್ಬಂದಿಗಳಿಗೆ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

# ಕ್ರೀಡಾ-ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಕಲ್ಯಾಣ ಇಲಾಖೆಯು ಜ. 11 ಹಾಗೂ 12ರಂದು ಬೆಳಗಾವಿಯಲ್ಲಿ ಏರ್ಪಡಿಸಿದ್ದ ಸಮಾಜ ಕಲ್ಯಾಣ ಇಲಾಖೆಯ ನೌಕರರ ಬೆಳಗಾವಿ ವಿಭಾಗ ಮಟ್ಟದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದ ಗದಗ ಜಿಲ್ಲೆಯ ಮಹಿಳಾ ಮತ್ತು ಪುರುಷ ನೌಕರರು ಒಟ್ಟು 7 ವಿಭಾಗಗಳಲ್ಲಿ ವಿವಿಧ ಸ್ಥಾನಗಳನ್ನು ಪಡೆಯುವ ಮೂಲಕ ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.



ವೈಯುಕ್ತಿಕ ಭಾವಗೀತೆಯಲ್ಲಿ ಪ್ರಥಮ, ಕ್ರಿಕೇಟ್‌ನಲ್ಲಿ ಪ್ರಥಮ, ಸಾಮೂಹಿಕ ಜಾನಪದ ಗೀತೆಯಲ್ಲಿ ದ್ವಿತೀಯ, ಮಹಿಳಾ ವಿಭಾಗದ ಶೆಟಲ್‌ಕಾಕ್‌ನಲ್ಲಿ ದ್ವಿತೀಯ, ಥ್ರೋಬಾಲ್‌ನಲ್ಲಿ ದ್ವಿತೀಯ, ಪುರುಷರ ವಿಭಾಗದ ಶೆಟಲ್‌ಕಾಕ್ ಸ್ಪರ್ಧೆಯಲ್ಲಿ ದ್ವಿತೀಯ ಹಾಗೂ ಕಿರು ನಾಟಕ ಸ್ಪರ್ಧೆಯಲ್ಲಿ ದ್ವಿತೀಯ ಹೀಗೆ ಒಟ್ಟು 7 ಸ್ಥಾನಗಳನ್ನು ಗಳಿಸುವ ಮೂಲಕ ಗದಗ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಬೆಳಗಾವಿ ವಿಭಾಗ ಮಟ್ಟದಲ್ಲಿ ವಿಜೇತರಾಗಿ ರಾಜ್ಯಮಟ್ಟದಕ್ಕೆ ಆಯ್ಕೆಯಾಗಿರುವ ಸಮಾಜ ಕಲ್ಯಾಣ ಇಲಾಖೆಯ ಗದಗ ಜಿಲ್ಲೆಯ ಎಲ್ಲ ತಾಲೂಕುಗಳ ಸಹಾಯಕ ನಿರ್ದೇಶಕರನ್ನು, ಕಚೇರಿ ಅಧೀಕ್ಷಕರನ್ನು, ವಾರ್ಡನ್, ಅಡುಗೆಯವರನ್ನು ಹಾಗೂ ಅಡುಗೆ ಸಹಾಯಕರನ್ನು ಗದಗ ಜಿಲ್ಲಾ ಸಮಾಜಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಮಹೇಶ ಪೋತದಾರ ಅಭಿನಂದಿಸಿದ್ದಾರೆ.

### ಟ್ರೀಟ್‌ಮೆಂಟ್ ಪ್ಲ್ಯಾಂಟ್ ನಿರ್ಮಾಣಕ್ಕೆ ಚಾಲನೆ ನೀಡಿದ ಶಾಸಕ ಡಾ. ಚಂದ್ರು ಲಮಾಣಿ

# ಮೂಲ ಸೌಲಭ್ಯ ಕಲ್ಪಿಸಲು ಪ್ರಥಮ ಆದ್ಯತೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಮತಕ್ಷೇತ್ರದ ಶಹರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಅಗತ್ಯವಿರುವ ಮೂಲಸೌಲಭ್ಯಗಳನ್ನು ಕಲ್ಪಿಸಲು ಪ್ರಥಮಾದ್ಯತೆ ನೀಡಲಾಗುವುದು. ಇದಕ್ಕೆ ಸಂಬಂಧಿಸಿದ ಇಲಾಖೆಗಳಿಗೆ ಈಗಾಗಲೇ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಹಂತ ಹಂತವಾಗಿ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲಾಗುವುದು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.



ಅವರು ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದಲ್ಲಿ 2023-24ನೇ ಸಾಲಿನ ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗದ ಎಸ್‌ಬಿಎಂ ಯೋಜನೆಯಡಿಯಲ್ಲಿ 71.90 ಲಕ್ಷ ರೂ ವೆಚ್ಚದಲ್ಲಿ ಟ್ರೀಟ್‌ಮೆಂಟ್ ಪ್ಲ್ಯಾಂಟ್ ನಿರ್ಮಾಣಕ್ಕೆ ಚಾಲನೆ ನೀಡಿ ಮಾತನಾಡಿದರು.

ಮತಕ್ಷೇತ್ರದಲ್ಲಿ ಬೆಳ್ಳಟ್ಟಿ ಗ್ರಾಮವು ಇತ್ತೀಚಿನ ದಿನಗಳಲ್ಲಿ ವೇಗವಾಗಿ ಬೆಳೆಯುತ್ತಿದ್ದು, ಇದಕ್ಕೆ ಪೂರಕವಾಗಿ ಗ್ರಾಮ ಪಂಚಾಯಿತಿ ವತಿಯಿಂದಲೂ ಅನೇಕ ಅಭಿವೃದ್ಧಿ ಕೆಲಸಗಳು ನಡೆಯುತ್ತಿವೆ. ಈ ಹಿಂದೆ 3 ಕೋಟಿ ರೂ ವೆಚ್ಚದಲ್ಲಿ ಘನ ತ್ಯಾಜ್ಯ ವಿಲೇವಾರಿ ಘಟಕದ ನಿರ್ಮಾಣಕ್ಕೆ ಚಾಲನೆ ನೀಡಲಾಗಿದ್ದು, ಈ ಕೆಲಸ ಪ್ರಗತಿಯಲ್ಲಿದೆ. ಒಳ್ಳೆಯ ಗುಣಮಟ್ಟದ ಕೆಲಸ ಮಾಡುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ. ನಿಯಮಾನುಸಾರ ನಿಗದಿತ ಸಮಯದಲ್ಲಿ ಕೆಲಸ ಪೂರ್ಣಗೊಳ್ಳಬೇಕೆಂದು ಸೂಚನೆ ನೀಡಲಾಗಿದೆ ಎಂದರು.

ಗ್ರಾ.ಪಂ ಅಧ್ಯಕ್ಷ ರಮೇಶ ನಿರ್ವಾಣಶೆಟ್ಟರ, ಸದಸ್ಯ ತಿಮ್ಮರಡ್ಡಿ ಮರಡ್ಡಿ, ಶಿವನಗೌಡ ಪಾಟೀಲ ಮಾತನಾಡಿ, ಬೆಳ್ಳಟ್ಟಿ ಗ್ರಾಮಕ್ಕೆ ರಾಜ್ಯ ಹೆದ್ದಾರಿಯಿಂದ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಶಾಸಕ ಡಾ. ಚಂದ್ರು ಲಮಾಣಿ ಹೆದ್ದಾರಿ ಅಧಿಕಾರಿಗಳೊಂದಿಗೆ ಚರ್ಚಿಸಿ ಗುಣಮಟ್ಟದ ರಸ್ತೆಯ ನಿರ್ಮಾಣ ಮಾಡಿಸಿದ್ದಾರೆ. ಇದೀಗ 3 ಕೋಟಿ ರೂ ವೆಚ್ಚದಲ್ಲಿ ಬೂದು ನೀರು ನಿರ್ವಹಣಾ ಘಟಕ ಅವಶ್ಯವಿದ್ದು, ಈ ಬಗ್ಗೆ ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ಗಮನಕ್ಕೂ ತರಲಾಗಿದೆ. ಆದ್ದರಿಂದ ಶಾಸಕ ಡಾ. ಚಂದ್ರು ಲಮಾಣಿ ಅವರು ಸಹ ಸಚಿವರೊಂದಿಗೆ ಚರ್ಚಿಸಿ ಸರಕಾರದ ಗಮನಕ್ಕೆ ತಂದು ಘಟಕ ನಿರ್ಮಾಣಕ್ಕೆ ಮುಂದಾಗಬೇಕೆಂದು ಹೇಳಿದರು.

ಮುಂಡರಗಿ ಬಿಜೆಪಿ ಮುಖಂಡ ಹೇಮಗಿರೀಶ ಹಾವಿನಾಳ, ಜಾನು ಲಮಾಣಿ, ಮೋಹನ ಗುತ್ತೆಮ್ಮನವರ, ರಾಘವೇಂದ್ರ ಗುತ್ತೆಮ್ಮನವರ, ಮಲ್ಲಯ್ಯ ಶೀಲವಂತಮಠ, ದ್ಯಾಮಣ್ಣ ಮಾಳಮ್ಮನವರ, ಪ್ರಕಾಶ ಗೋಪಾಳಿ, ಸಂತೋಷ ಮಣ್ಣವಡ್ಡರ, ಆರ್‌ಡಬ್ಲ್ಯುಎಸ್ ಎಇಇ ಮಲ್ಲಿಕಾರ್ಜುನ ಪಾಟೀಲ, ಜೆಇ ಎಂ.ಬಿ. ಹರಕುಣಿ, ಗುತ್ತಿಗೆದಾರ ವೆಂಕಟೇಶ ವಡ್ಡರ ಮುಂತಾದವರು ಉಪಸ್ಥಿತರಿದ್ದರು.

### ಖರ್ಚು ಮಾಡಿದ ಹಣ ಬಾರದಂತಾಗಿದೆ

ಬೆಳ್ಳಟ್ಟಿ ಗ್ರಾಮ ಪಂಚಾಯತಿಯ ಕೇಂದ್ರಸ್ಥಾನದಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗದ ವತಿಯಿಂದ ನಡೆಯುತ್ತಿದ್ದ ಕಾರ್ಯಕ್ರಮಕ್ಕೆ ಬ್ಯಾನರ್‌ನಲ್ಲಿ ಗ್ರಾಮ ಪಂಚಾಯಿತಿಯ ಹೆಸರು ಹಾಕದೇ ಇರುವುದಕ್ಕೆ ಅಧ್ಯಕ್ಷ ರಮೇಶ ನಿರ್ವಾಣಶೆಟ್ಟರ ಮತ್ತು ಸದಸ್ಯ ಶಿವನಗೌಡ ಪಾಟೀಲ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ನಂತರ ಶಾಸಕ ಡಾ. ಚಂದ್ರು ಲಮಾಣಿ ಅವರ ಗಮನಕ್ಕೆ ಈ ವಿಷಯವನ್ನು ಪ್ರಸ್ತಾಪಿಸಿದಾಗ ಅವರು ಕೂಡಾ ಅಧಿಕಾರಿಗಳಿಗೆ ಶಿಷ್ಟಾಚಾರ ಪಾಲಿಸುವಂತೆ ಸೂಚನೆ ನೀಡಿ ಮತ್ತೆ ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕೆಂದು ಸೂಚನೆ ನೀಡಿದರು.

# ವಿದ್ಯಾರ್ಥಿ ಜೀವನ ಹೂವಿನ ಹಾಸಿಗೆಯಲ್ಲ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕ್ಷೇತ್ರದಲ್ಲಿ ಅನೇಕ ಸರಕಾರಿ ಶಾಲಾ-ಕಾಲೇಜುಗಳಲ್ಲಿ ಅವಶ್ಯವಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಅನೇಕ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಪಡೆದುಕೊಂಡು ಶೈಕ್ಷಣಿಕ ಸಾಧನೆಯ ಹಾದಿಯಲ್ಲಿ ಸಾಗಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ತೋಟಪ್ಪ ಮಾನ್ವಿ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಬುಧವಾರ ಮೂಲಭೂತ ಸೌಲಭ್ಯಗಳ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಸರಕಾರಗಳು ಶಿಕ್ಷಣ ಕ್ಷೇತ್ರದಲ್ಲಿ ಎಲ್ಲ ಮಕ್ಕಳಿಗೂ ಉತ್ತಮ ಶಿಕ್ಷಣ ದೊರೆಯಬೇಕು ಎನ್ನುವ ಉದ್ದೇಶದಿಂದ ಹಲವಾರು ಸೌಲಭ್ಯಗಳನ್ನು ಒದಗಿಸುತ್ತಿವೆ. ಸರಕಾರ ಒದಗಿಸುವ ಯೋಜನೆಗಳನ್ನು ಪಡೆದುಕೊಳ್ಳುವದರೊಂದಿಗೆ ಸಾಧನೆ ಮಾಡುವ ಛಲ ವಿದ್ಯಾರ್ಥಿಗಳಲ್ಲಿ ಬರಬೇಕು. ವಿದ್ಯಾರ್ಥಿ ಜೀವನ ಹೂವಿನ ಹಾಸಿಗೆಯಲ್ಲ, ಕಠಿಣ ಪರಿಶ್ರಮ ಹಾಗೂ ನಿರಂತರ ಅಧ್ಯಯನದಿಂದ ಮಾತ್ರ ಯಶಸ್ಸು ಸಿಗುತ್ತದೆ. ಕ್ಷೇತ್ರದಲ್ಲಿನ ಖಾಸಗಿ, ಸರಕಾರಿ ಎಲ್ಲ ಶಾಲಾ-ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳು ದೊರೆಯಬೇಕೆಂಬ ಉದ್ದೇಶವನ್ನು ಹೊಂದಿದ್ದು, ಈ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಪಟ್ಟಣದ ಪ.ಪೂ ಕಾಲೇಜಿಗೆ ಅವಶ್ಯವಿರುವ ಸೌಲಭ್ಯಗಳನ್ನು ಒದಗಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದು ಹೇಳಿದರು.

ಸುನೀಲ ಮಹಾಂತಶೆಟ್ಟರ, ನವೀನ ಬೆಳ್ಳಟ್ಟಿ, ಬಸವರಾಜ ಚಕ್ರಸಾಲಿ, ಗಿರೀಶ ಚೌರಡ್ಡಿ, ಬಸವರಾಜ ಶೆಟ್ಟರ, ಮಂಜುನಾಥ ಗೊರವರ, ಶಕ್ತಿ ಕತ್ತಿ, ಅನಿಲ ಮುಳುಗುಂದ, ನೀಲಪ್ಪ ಹತ್ತಿ, ಸಂತೋಷ ಜಾವೂರ, ತೋಂಟೇಶ ಮಾನ್ವಿ, ವಿಜಯ ಮೆಕ್ಕಿ, ಮೈನು, ಗದಗ ಜಿಇ ಅನಿಲ ಚೌರಡ್ಡಿ, ಕಾಲೇಜು ಪ್ರಾಚಾರ್ಯ ಮಂಜುನಾಥ ಕೊಕ್ಕರಗುಂದಿ, ಉಪನ್ಯಾಸಕರುಗಳಾದ ಬಿ.ಎನ್. ದೊಡ್ಡಮನಿ, ವಿನಾಯಕ ವೇತಾಳ, ಎನ್.ಓ. ಸಾತಪುತೆ ಸೇರಿದಂತೆ ಕಾಲೇಜು ಸಿಬ್ಬಂದಿಗಳು ಇದ್ದರು.

# ಬಿ.ಕಾಂ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಮಹಾವಿದ್ಯಾಲಯವು ಶೈಕ್ಷಣಿಕ ಸಾಲಿನ ಬಿ.ಕಾಂ ಕೋರ್ಸಿನ 4ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದೆ.

ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ತೌಸಿಫ ಮುಲ್ಲಾ (676 ಅಂಕ) ಪ್ರಥಮ ಸ್ಥಾನ, ಹಾಗೂ ಫೈನಾನ್ಸಿಯಲ್ ಮ್ಯಾನೇಜ್‌ಮೆಂಟ್ ವಿಷಯದಲ್ಲಿ 100ಕ್ಕೆ 100 ಅಂಕ ಪಡೆದಿದ್ದಾನೆ. ತೇಜಸ್ವಿನಿ ಮೆಣಸಿನಕಾಯಿ (646 ಅಂಕ) ದ್ವಿತೀಯ ಸ್ಥಾನ, ಹರಿಹರನ ಚಂದ್ರಶೇಖರ (640 ಅಂಕ) ತೃತೀಯ ಸ್ಥಾನ, ವಿಜಯಲಕ್ಷ್ಮೀ ಕಾಗಿ (607 ಅಂಕ) 4ನೇ ಸ್ಥಾನ, ಪ್ರಜ್ವಲ ಮೆಣಸಿನಕಾಯಿ (598 ಅಂಕ) 5ನೇ ಸ್ಥಾನ ಪಡೆದಿದ್ದಾರೆ.

ಮಹಾವಿದ್ಯಾಲಯದ ಫಲಿತಾಂಶ 100ಕ್ಕೆ 100ರಷ್ಟು ಆಗಿದೆ. ಮಹಾವಿದ್ಯಾಲಯದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್. ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಅಲ್ವಿನಾ ಡಿ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.

# 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರವು ಸ್ಥಾಪಿಸಿರುವ ಮೊರಾರ್ಜಿ ದೇಸಾಯಿ / ಕಿತ್ತೂರು ರಾಣಿ ಚೆನ್ನಮ್ಮ / ಅಟಲ್ ಬಿಹಾರಿ ವಾಜಪೇಯಿ / ಡಾ. ಬಿ.ಆರ್.ಅಂಬೇಡ್ಕರ್ / ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗಳಲ್ಲಿ 6 ರಿಂದ 10 ನೇ ತರಗತಿಯವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಪ್ರತಿಭಾನ್ವಿತ ಬಡ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಈ ಶಾಲೆಗಳಲ್ಲಿ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಅಂದರೆ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರವೇಶ ಲಭ್ಯವಿದೆ. ಪೋಷಕರ ವಾರ್ಷಿಕ ಆದಾಯದ ಮಿತಿಯು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ. 2,50,000/- ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ರೂ. 1,00,000/- ಇರುತ್ತದೆ. ಮೊರಾರ್ಜಿ ದೇಸಾಯಿ / ಅಟಲ್ ಬಿಹಾರಿ ವಾಜಪೇಯಿ / ಡಾ. ಬಿ.ಆರ್. ಅಂಬೇಡ್ಕರ್ / ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗಳಲ್ಲಿ ಶೇ.50% ಸೀಟುಗಳನ್ನು ಬಾಲಕಿಯರಿಗೆ, ಶೇ. 50% ಸೀಟುಗಳನ್ನು ಬಾಲಕರಿಗೆ ಕಾಯ್ದಿರಿಸಲಾಗಿದೆ.

ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ಶೇ.100% ಸೀಟುಗಳು ಬಾಲಕಿಯರಿಗೆ ಲಭ್ಯವಿರುತ್ತದೆ.

ಗದಗ ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು 15 ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, 2025-26ನೇ ಸಾಲಿನ 6ನೇ ತರಗತಿಗೆ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಿಗೆ 80 ವಿದ್ಯಾರ್ಥಿಗಳನ್ನು ಹಾಗೂ ಇನ್ನುಳಿದ ಎಲ್ಲಾ ವಸತಿ ಶಾಲೆಗಳಿಗೆ 50 ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರುವ ಹಾಗೂ ಸರ್ಕಾರದಿಂದ ಅನುಮೋದಿಸಲ್ಪಟ್ಟ ಯಾವುದೇ ಶಾಲೆಯಲ್ಲಿ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ 09 ರಿಂದ 13 ವಯೋಮಾನದವರಾಗಿರುವ ಅರ್ಹ ಅಭ್ಯರ್ಥಿಗಳು ಈ ಪ್ರವೇಶ ಪರೀಕ್ಷೆಗೆ ಜನವರಿ 25 ರವರಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಈ ಬಗ್ಗೆ ಫೆಬ್ರವರಿ 15 ರ ಮಧ್ಯಾಹ್ನ 2-30 ರಿಂದ 04-30 ಘಂಟೆಯವರೆಗೆ ತಾಲೂಕು ಕೇಂದ್ರಗಳಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ವತಿಯಿಂದ ರಾಜ್ಯ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುವುದು. ಬಹು ಆಯ್ಕೆ ಪ್ರಶ್ನೆಗಳನ್ನು ಒಳಗೊಂಡಿರುವ 100 ಅಂಕಗಳ ಪ್ರಶ್ನೆ ಪತ್ರಿಕೆಯನ್ನು ನೀಡಲಾಗುವುದು. ಉತ್ತರಗಳನ್ನು ಓ.ಎಮ್.ಆರ್. ಪದ್ಧತಿಯಲ್ಲಿ ಉತ್ತರಿಸುವುದು.

2025-26ನೇ ಸಾಲಿನಲ್ಲಿ 6ನೇ ತರಗತಿಗೆ ದಾಖಲಾತಿ ಬಯಸುವ ಅಭ್ಯರ್ಥಿಗಳ ಪಾಲಕರು /ಪೋಷಕರು ಈ ಕೆಳಕಂಡ ದಾಖಲಾತಿಗಳೊಂದಿಗೆ ಹತ್ತಿರದ ಯಾವುದಾದರೊಂದು ವಸತಿ ಶಾಲೆಗಳಿಗೆ ಸಂಪರ್ಕಿಸಲು ತಿಳಿಸಿದೆ.

SATS ಸಂಖ್ಯೆ:- ಶಾಲಾ ಧೃಡೀಕರಣ ಪತ್ರ (ಎಸ್.ಎ.ಟಿ.ಎಸ್ & ಶಾಲಾ ಡೈಸ್ ಕೋಡ್ ನಮೂದಿಸಿರಬೇಕು),ಆಧಾರ್ ಕಾರ್ಡ್, ಇತ್ತೀಚಿನ ಭಾವಚಿತ್ರ-2 ಹಾಗೂ ಚಾಲ್ತಿಯಲ್ಲಿರುವ ಪಾಲಕರ ದೂರವಾಣಿ ಸಂಖ್ಯೆ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ., ಸ್ಥಳೀಯ ಅಭ್ಯರ್ಥಿ ಎಂದು ರುಜುವಾತು ಪಡಿಸಲು ಅಗತ್ಯವಾದ ಆಧಾರ್ ಕಾರ್ಡ್ / ರೇಷನ್ ಕಾರ್ಡ್ / ವಾಸ ಸ್ಥಳ ಪ್ರಮಾಣ ಪತ್ರ. ವಿಶೇಷ ವರ್ಗಕ್ಕೆ ಸೇರಿದವರಾಗಿದ್ದಲ್ಲಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ದಾಖಲೆಗಳನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ವಸತಿ ಶಾಲೆಯ ಪ್ರಾಚಾರ್ಯರಿಗೆ ತೋರಿಸಬೇಕು ಮತ್ತು ಅವುಗಳ ಒಂದು ನಕಲು ಪ್ರತಿಯನ್ನು ಸಲ್ಲಿಸಬೇಕು.

ಪಾಲಕರು/ ಪೋಷಕರು ಗದಗ ಜಿಲ್ಲೆಯಲ್ಲಿ ಸ್ಥಾಪಿಸಲಾಗಿರುವ ಕ್ರೈಸ್ ಸಂಘದ ವಸತಿ ಶಾಲೆಗಳ ವಿವರಗಳನ್ನು ಪಡೆದುಕೊಂಡು, ತಮ್ಮ ಮಕ್ಕಳನ್ನು ಯಾವ ಶಾಲೆಗೆ ಸೇರಿಸಬೇಕು ಎಂಬುದನ್ನು ತೀರ್ಮಾನಿಸಿ ಆದ್ಯತಾ ಕ್ರಮದಲ್ಲಿ ನಮೂದಿಸಬೇಕು.

ಹೆಚ್ಚಿನ ವಿವರಗಳಿಗಾಗಿ ಪ್ರಾಧಿಕಾರದ ವೆಬ್‌ಸೈಟ್ https://cetonlie.karnataka.gov.in/kea/ ಹಾಗೂ ವಸತಿ ಶಾಲೆಗಳ ಪ್ರಾಂಶುಪಾಲರಿಗೆ ಸಂಪರ್ಕಿಸಬಹುದಾಗಿದೆ.

# ಜ.19ರಂದು ವೇಮನ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಇವರ ಸಹಯೋಗದಲ್ಲಿ ಮಹಾಯೋಗಿ ವೇಮನ ಜಯಂತಿ-2025 ಯನ್ನು ಜನವರಿ 19 ರಂದು ಸಂಜೆ 4 ಗಂಟೆಗೆ ನಗರದ ಕಳಸಾಪುರ ರಸ್ತೆಯಲ್ಲಿನ ಶ್ರೀ ಶಿವಾನಂದ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ. ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಮುಖ್ಯಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಯಪ ಶೆಟ್ಟರ್ , ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ ಆಗಮಿಸುವರು.

ಮುಳಗುಂದ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರಾದ ಡಾ. ರಮೇಶ ಮ ಕಲ್ಲನಗೌಡರ ಅವರು ಮಹಾಯೋಗಿ ವೇಮನರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡುವರು. ಕು. ರೇಣುಕಾ ಶಂಕರಗೌಡ ಮತ್ತು ತಂಡದವರಿಂದ ಸುಗಮ ಸಂಗೀತ ಜರುಗಲಿದೆ. ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸ್ವಾಗತ ಕೋರಿದ್ದಾರೆ.

# ಉಚಿತ ಕಂಪ್ಯೂಟರ್, ಹೊಲಿಗೆ ತರಬೇತಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ತರಬೇತಿ ಪಡೆಯಲು ಬಂದಿರುವ ಪ್ರತಿ ಮಹಿಳೆಯರು ಸ್ವಾಲಂಬಿಗಳಾಗಲು ಕಂಪ್ಯೂಟರ್ ಮತ್ತು ಹೊಲಿಗೆ ತರಬೇತಿಯನ್ನು ಪಡೆಯುವುದು ಅವಶ್ಯಕವಾಗಿದೆ. ಇದರ ಸಂಪೂರ್ಣ ಸದುಪಯೋಗವನ್ನು ಪಡೆದುಕೊಳ್ಳಿ ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಿವಲೀಲಾ ಬಂಡಿಹಾಳ ಹೇಳಿದರು.




ಡಂಬಳ ಗ್ರಾಮದಲ್ಲಿ ರಮನ್ ಕಾಂತ ಮುಂಜಾಲ್ ಫೌಂಡೇಶನ್ ಮತ್ತು ಹಿರೋ ಫ್ಯೂಚರ್ ಎನರ್ಜಿ ಪ್ಲಾಂಟ್ ಪಾಸಿಟೀವ್ ಇವರ ಸಂಯುಕ್ತ ಆಶ್ರಯದಲ್ಲಿ ಉಚಿತ ಕಂಪ್ಯೂಟರ್ ಮತ್ತು ಹೊಲಿಗೆ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹೀರೋ ಕಂಪನಿಯ ಮುಖ್ಯ ಸಿಎಚ್‌ಆರ್ ಭಾವನಾ ಕೃಪಾಮಿತ್ತಲ್, ಕೋ ಆರ್‌ಕೆಎಮ್‌ಎಫ್ ಅಧಿಕಾರಿ ರವಿ ಬಹುಜಾ ಮಾತನಾಡಿದರು. ಎಪಿಎಂಸಿ ಮಾಜಿ ಅಧ್ಯಕ್ಷ ವಿ.ಎಸ್. ಯರಾಶಿ ಮಾತನಾಡಿ, ಗ್ರಾಮೀಣ ಮಹಿಳೆಯರು ಕಂಪ್ಯೂಟರ್, ಹೊಲಿಗೆ ತರಬೇತಿ ಪಡೆಯಲು ನಗರಗಳಿಗೆ ತೆರಳಬೇಕಾಗಿತ್ತು. ಆದರೆ ಹೀರೋ ಕಂಪನಿ ಇಲ್ಲಿಯೇ ತರಬೇತಿಯನ್ನು ಪ್ರಾರಂಭಿಸಿ ಅನಕೂಲತೆಯನ್ನು ಕಲ್ಪಿಸಿದೆ. ಇದರ ಸದುಪಯೋಗವನ್ನು ಪಡೆದುಕೊಳ್ಳಿ ಎಂದು ಹೇಳಿದರು.

ಶಿಬಿರಾರ್ಥಿ ಸೈನಾಜ ಸರಕಾವಾಸ ಅಭಿಪ್ರಾಯ ಹಂಚಿಕೊಂಡರು. ಕಾರ್ಯಕ್ರಮದಲ್ಲಿ ಅರ್ಜನಾ ಕೌಲ್‌ಸುಂಬಾಲಿ, ಸದಸ್ಯ ಜಾಕೀರ ಮೂಲಿಮನಿ, ಪಿಡಿಒ ಲತಾ ಮಾನೆ, ಪೀರೋಜ, ನಾಶೀರ, ಅಲಮಾಸ ಮುಲ್ಲಾ, ಜಂದುಬಿ ಹಿರೇಮನಿ, ರಾಜೇಸಾಬ ಹಿರೇಮನಿ, ಗೌರಮ್ಮ ಮುಸುಂಡಿ, ಲಕ್ಷ್ಮೀ ಪ್ಯಾಟಿ ಮುಂತಾದವರು ಇದ್ದರು.

# ಕಾನೂನು ಅರಿವು ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ಕಡಕೋಳ ಗ್ರಾಮದ ಸರಕಾರಿ ಪದವಿಪೂರ್ವ ಕಾಲೇಜಿನಲ್ಲಿ ಪೊಲೀಸ್ ಇಲಾಖೆ ವತಿಯಿಂದ ರಸ್ತೆ ಸುರಕ್ಷತಾ ಮತ್ತು ಕಾನೂನು ಅರಿವು ಕಾರ್ಯಕ್ರಮ ನಡೆಯಿತು.




ಈ ಸಂದರ್ಭದಲ್ಲಿ ಮಾತನಾಡಿದ ಶಿರಹಟ್ಟಿ ಸಿಪಿಐ ನಾಗರಾಜ ಮಾಢಳ್ಳಿ, 18 ವರ್ಷದ ಒಳಗಿನ ಮಕ್ಕಳು ವಾಹನಗಳನ್ನು ಚಾಲನೆ ಮಾಡಬಾರದು. ಕಡ್ಡಾಯವಾಗಿ ಸೀಟ್ ಬೆಲ್ಟ್ ಹಾಗೂ ಹೆಲ್ಮೆಟ್ ಧರಿಸಬೇಕು. ದೇಶದ ಅಭಿವೃದ್ಧಿಯೊಂದಿಗೆ ಯುವಕರ ಸುರಕ್ಷತೆಯೂ ಸಹ ಅಷ್ಟೇ ಮುಖ್ಯವಾಗಿರುತ್ತದೆ. ಮೊಬೈಲ್ ಮೂಲಕ ಅನೇಕ ಸೈಬರ್ ಕ್ರೈಂ ಪ್ರಕರಣಗಳಾಗುತ್ತಿದ್ದು, ಇಂತಹುದರ ಬಗ್ಗೆ ಜಾಗೃತಿ ವಹಿಸಬೇಕು. ವಿದ್ಯಾರ್ಥಿ ಹಂತದಲ್ಲಿ ಗಾಂಜಾ, ಡ್ರಗ್ಸ್ ಇತ್ಯಾದಿ ಮಾದಕ ಪದಾರ್ಥಗಳ ಮೊರೆ ಹೋಗಬಾರದು. ದುಶ್ಚಟಗಳಿಂದ ದೂರವಿದ್ದು, ಒಳ್ಳೆಯ ವಿದ್ಯಾರ್ಥಿಗಳಾಗಿ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ ಉಜ್ವಲ ಭವಿಷ್ಯವನ್ನು ಕಂಡುಕೊಳ್ಳಬೇಕೆಂದು ಹೇಳಿದರು.

ಪಿಎಸ್‌ಐ ಚನ್ನಯ್ಯ ದೇವೂರ ಮಾತನಾಡಿ, ವಿದ್ಯಾರ್ಥಿಗಳ ಜೀವನವು ಬಂಗಾರದ ಜೀವನವಿದ್ದಂತೆ. ಭವಿಷ್ಯದ ಬಗ್ಗೆ ಯೋಚನೆ ಮಾಡಿ ಒಳ್ಳೆಯ ವಿದ್ಯಾಭ್ಯಾಸ ಮಾಡಬೇಕು. ಮೊಬೈಲ್‌ಗಳನ್ನು ಕೆಟ್ಟದ್ದಕ್ಕೆ ಬಳಸಿಕೊಳ್ಳದೇ ಒಳ್ಳೆಯದಕ್ಕೆ ಬಳಕೆ ಮಾಡಬೇಕು. ಕಾನೂನನ್ನು ಪ್ರತಿಯೊಬ್ಬರೂ ಗೌರವಿಸಬೇಕೆಂದು ಹೇಳಿದರು.

ಪ್ರಾಂಶುಪಾಲರಾದ ಕನಕಾಂಬ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಆಕ್ಷೇಪಣೆಗೆ ಜ. 23 ಕೊನೆಯ ದಿನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಕಂದಾಯ ಘಟಕದಲ್ಲಿ ಖಾಲಿ ಇರುವ 30 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನೀಡಿರುವ ಮೆರಿಟ್ ಪಟ್ಟಿಯಲ್ಲಿ ( ಖಅ_ಕಊ-01 ಹುದ್ದೆಯ ಮೀಸಲಾತಿಗೆ ಅರ್ಹ ಅಭ್ಯರ್ಥಿ ಲಭ್ಯವಿಲ್ಲದೇ ಇರುವುದರಿಂದ ) ಇನ್ನುಳಿದ 29 ಹುದ್ದೆಗಳಿಗೆ 1:3 ಅನುಪಾತದನ್ವಯ ಮೂಲ ದಾಖಲಾತಿ ಪರಿಶೀಲನೆಗಾಗಿ 87 ಅಭ್ಯರ್ಥಿಗಳ ಪಟ್ಟಿಯನ್ನು ಗದಗ ಜಿಲ್ಲೆಯ ಅಧಿಕೃತ ವೆಬ್ ಸೈಟ್ **http://www.gadag.nic.in** ರಲ್ಲಿ ಪ್ರಕಟಿಸಲಾಗಿದೆ.

29 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಜನವರಿ 3 ಮತ್ತು 4 ರಂದು ಮೂಲ ದಾಖಲಾತಿ ಪರಿಶೀಲನೆ ಮತ್ತು ವಿಕಲಚೇತನ ಅಭ್ಯರ್ಥಿಗಳ ವೈದ್ಯಕೀಯ ಪರೀಕ್ಷೆ ನಡೆಸಿ ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ)ಸಾಮಾನ್ಯ ನಿಯಮಗಳು 2021 ರಂತೆ 1:1 ಅನುಪಾತದನ್ವಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಮತ್ತು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರಿಕ ಸೇವಾ ನಿಯಮಗಳಲ್ಲಿ ತಿಳಿಸಿರುವಂತೆ ತಾತ್ಕಾಲಿಕ ಹೆಚ್ಚುವರಿ ಪಟ್ಟಿಯನ್ನು ಗದಗ ಜಿಲ್ಲೆಯ ಅಧಿಕೃತ ವೆಬ್‌ಸೈಟ್ http://www.gadag.nic.in ರಲ್ಲಿ ಪ್ರಕಟಿಸಲಾಗಿದೆ.

ಸದರಿ ಪಟ್ಟಿಗಳಿಗೆ ಯಾವುದಾದರೂ ಆಕ್ಷೇಪಣೆಗಳು ಇದ್ದಲ್ಲಿ ಜನವರಿ 23 ರೊಳಗಾಗಿ ಗ್ರಾಮ ಆಡಳಿತ ಅಧಿಕಾರಿಗಳ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ, ಜಿಲ್ಲಾಡಳಿತ ಭವನ, ಗದಗ -582101 ಇವರಿಗೆ ಅಭ್ಯರ್ಥಿಗಳು ಆಕ್ಷೇಪಣೆಗಳನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಸಲ್ಲಿಸಬಹುದಾಗಿದೆ.

ಒಂದು ವೇಳೆ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳು ಸೇವೆಗೆ ಹಾಜರಾಗದಿದ್ದ ಪಕ್ಷದಲ್ಲಿ ಮಾತ್ರ ಹೆಚ್ಚುವರಿ ತಾತ್ಕಾಲಿಕ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನು ನಿಯಮಾನುಸಾರ ಪರಿಗಣಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ಸ್ಮರಣೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಇತ್ತೀಚೆಗೆ ಲಿಂಗೈಕ್ಯರಾದ ಶರಣ ಬಸವಣ್ಣೆಪ್ಪ ಬಿ.ಕಾಮಣ್ಣವರ ಇವರ ಸ್ಮರಣೋತ್ಸವವು ಜ.17ರಂದು ಮುಂಜಾನೆ 11 ಗಂಟೆಗೆ ವೀರೇಶ್ವರ ನಗರದ ಶರಣೆ ಮಂಗಳಕ್ಕ ಬಸವಣ್ಣೆಪ್ಪ ಕಾಮಣ್ಣವರ ಇವರ ಮನೆಯಲ್ಲಿ ಜರುಗಲಿದೆ. ಸಾನ್ನಿಧ್ಯವನ್ನು ಬಸವ ಧರ್ಮದ ಪೀಠಾಧ್ಯಕ್ಷರಾದ ಪೂಜ್ಯ ಗಂಗಾಮಾತೆಯವರು ವಹಿಸುವರು. ಅಧ್ಯಕ್ಷತೆಯನ್ನು ಗದಗ-ಬೆಟಗೇರಿ ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು.

ಕಾಮಣ್ಣವರ ಬಂಧು-ಬಳಗ, ಸ್ನೇಹಿತರು ಮತ್ತು ಬಸವದಳದ ಸದಸ್ಯರು ಆಗಮಿಸಬೇಕೆಂದು ಶರಣ ಚನ್ನಬಸವಣ್ಣ ಬಸವಣ್ಣೆಪ್ಪ ಕಾಮಣ್ಣವರ ಭಿನ್ನವಿಸಿದ್ದಾರೆ.

# ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ಪುರಸಭೆ ಆಸ್ತಿ ಸಂಖ್ಯೆ : 4010/9 ಯನ್ನು ರೋಣ ತಾಲೂಕು ಹಾಲು ಉತ್ಪಾದಕರ ಸಹಕಾರ ಸಂಘ ನಿಯಮಿತ ರೋಣ ಇವರಿಗೆ ನಿವೇಶನ ಮತ್ತು ಕಟ್ಟಡ ಮಂಜೂರು ಮಾಡಲು ತೀರ್ಮಾನಿಸಲಾಗಿದೆ. ಈ ಕುರಿತು ಯಾವುದೇ ತಕರಾರು ಆಕ್ಷೇಪಣೆ ಇದ್ದಲ್ಲಿ 30 (ಮೂವತ್ತು) ದಿವಸಗಳಲ್ಲಿ ಲಿಖಿತವಾಗಿ ಸಲ್ಲಿಸಬೇಕು. ತಪ್ಪಿದಲ್ಲಿ ಯಾವುದೇ ಆಕ್ಷೇಪಣೆಗಳು ಇರುವುದಿಲ್ಲ ಎಂದು ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ರೋಣ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ಹೂವಿನಶಿಗ್ಲಿ ವಿರಕ್ತಮಠದಲ್ಲಿ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಶ್ರೀ ಚನ್ನಬಸವ ಮಹಸ್ವಾಮಿಗಳ ನುಡಿ

# ಆದರ್ಶಮಯ ಜೀವನಕ್ಕೆ ಅಣಿಯಾಗಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿವಾಹ ಬಂಧನವೆಂದರೆ ಎರಡು ಮನಸ್ಸು, ಜೀವಗಳು ಒಂದಾಗಿ ಪರಸ್ಪರರು ಹಾಲು-ಜೇನಿನಂತೆ ಅನ್ಯೋನ್ಯತೆಯಿಂದ ಜೀವನಸಾಗಿಸುವಪವಿತ್ರಬಂಧವಾಗಿದೆಎಂದು ಸವಣೂರ ದೊಡ್ಡ ಹುಣಸೇಮಠದ ಶ್ರೀ ಚನ್ನಬಸವ ಮಹಸ್ವಾಮಿಗಳು ನುಡಿದರು.

ಅವರು ಬುಧವಾರ ಸಮೀಪದ ಹೂವಿನಶಿಗ್ಲಿ ವಿರಕ್ತಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀಮಠದಲ್ಲಿ ಹಮ್ಮಿಕೊಂಡಿದ್ದ ಸಾಮೂಹಿಕ ವಿವಾಹ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಾಮೂಹಿಕ ವಿವಾಹ ಎಂದರೆ ಅದು ಕೇವಲ ಬಡ ಜನರ ಮದುವೆ ಕಾರ್ಯಕ್ರಮ ಎಂದು ಭಾವಿಸುವುದು ತಪ್ಪು. ಪವಿತ್ರವಾದ ಧಾರ್ಮಿಕ ಕ್ಷೇತ್ರ, ಸಹಸ್ರಾರು ಭಕ್ತರ ಮತ್ತು ಮಠಾಧೀಶರ ಆಶೀರ್ವಾದದೊಂದಿಗೆ ಸಾಮೂಹಿಕ ವಿವಾಹ ಬಂಧನಕ್ಕೊಳಗಾಗುವ ಭಾಗ್ಯ ಜೀವನದ ಸಾರ್ಥಕತೆಯ ಕ್ಷಣವಾಗಿದೆ. ನವ ದಂಪತಿಗಳು ತಂದೆ-ತಾಯಿ, ಅತ್ತೆ-ಮಾವ, ಗುರು ಹಿರಿಯರಲ್ಲಿ ವಿಧೇಯತೆ, ತಾಳ್ಮೆಯಿಂದ ಆದರ್ಶಮಯ ಜೀವನಕ್ಕೆ ಅಣಿಯಾಗಬೇಕು. ಸಂಸಾರದ ಗುಟ್ಟು ಬಿಟ್ಟುಕೊಡದೇ ಪ್ರೀತಿ, ವಿಶ್ವಾಸದಿಂದ ಸಂಸಾರದ ಜೋಡೆತ್ತಿನ ಬಂಡಿ ಸರಾಗವಾಗಿ ಸಾಗಿದಾಗ ಮಾತ್ರ ಆ ಮನೆ ಸ್ವರ್ಗವಾಗುತ್ತದೆ. ಸಂಪ್ರದಾಯ, ಸಂಸ್ಕೃತಿ, ಧರ್ಮ ಮಾರ್ಗ ಮತ್ತು ಮಠ-ಮಾನ್ಯಗಳ ಸತ್ಸಂಗದೊಂದಿಗೆ ಸಾತ್ವಿಕ ಜೀವನಕ್ಕೆ ಒಗ್ಗಿಕೊಳ್ಳಬೇಕು. ಲಿಂ. ನಿರಂಜನ ಶ್ರೀಗಳು ಹಾಕಿ ಕೊಟ್ಟ ಮಾರ್ಗದಲ್ಲಿ ಚನ್ನವೀರ ಸ್ವಾಮಿಗಳು ಸಮಾಜಮುಖಿ ಕಾರ್ಯದಲ್ಲಿ ಹೆಸರಾಗಿದ್ದು, ಭಕ್ತರು ಸಹಾಯ-ಸಹಕಾರ ನೀಡಬೇಕೆಂದರು.



ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು. ಗುಡ್ಡದಾನ್ವೇರಿ ಮಠದ ಶಿವಯೋಗಿಶ್ವರ ಮಹಾಸ್ವಾಮಿಗಳು,ಹೊಸರಿತ್ತಿಯಗುದ್ದಲೀಶ್ವರ ಶ್ರೀ, ನೀಲಗುಂದದ ಚನ್ನಬಸವ ಶ್ರೀ, ಹುಬ್ಬಳ್ಳಿ ರುದ್ರಾಕ್ಷಿಮಠದ ಬಸವಲಿಂಗ ಶ್ರೀ, ಕುಂದಗೋಲದಬಸವಣ್ಣಜ್ಜನವರುಸಾನ್ನಿಧ್ಯ ವಹಿಸಿದ್ದರು. ದಾನಿಗಳಾದ ಸೋನಾಳದ ವಿಜಯ ಕುಮಾರ ಬಿರಾದಾರ, ಬಾಲ್ಕಿಯ ಲೋಕೇಶಹನಮಶೆಟ್ಟಿ,ಲಕ್ಷ್ಮೇಶ್ವರದರಾಘವೇಂದ್ರ ಶೇಠ, ಬಾಪೂಗೌಡ ಪಾಟೀಲ ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು.

10 ಜೋಡಿಗಳು ವಿವಾಹ ಬಂಧಕ್ಕೊಳಗಾದರು. ನಂತರ ಶ್ರೀಗಳ ತುಲಾಭಾರ, ಗುರುಕುಲ ಮಕ್ಕಳಿಂದ ಮಲ್ಲಕಂಬ ಪ್ರದರ್ಶನ, ಕಡುಬಿನ ಕಾಳಗ ಹಾಗೂಮಹಾತ್ಮರಬದುಕು-ಬೆಳಕುಕುರಿತು ಚಿಂತನ ಗೋಷ್ಠಿ ನಡೆಯಿತು. ಜಾತ್ರೆಗೆ ಆಗಮಿಸಿದ ಅಪಾರ ಭಕ್ತ ಸಮೂಹ ಜಾತ್ರೆಯ ವಿಶೇಷತೆಯಾದ ಕರಿಂಡಿ, ಖಡಕ್ ರೊಟ್ಟಿ, ಗೋದಿಹುಗ್ಗಿ ಸವಿದರು.

ಮಂಗಳವಾರ ಸಂಜೆ ನಡೆದ ಧರ್ಮ ಸಭೆಯಲ್ಲಿ ಆಶೀರ್ವಚನ ನೀಡಿದ ಅನ್ನದಾನೀಶ್ವರ ಜಗದ್ಗುರುಗಳು, ಸಂಸ್ಕೃತಿ, ಆಚಾರ-ವಿಚಾರ, ಮೌಲ್ಯಗಳನ್ನು ಬಿತ್ತುವ ಮೂಲಕ ಸಾಮಾಜಿಕ ಬದಲಾವಣೆಯಲ್ಲಿ ಮಠ-ಮಾನ್ಯಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮನುಷ್ಯನ ಬದುಕು ಮೌಲ್ಯಯುತ ಮತ್ತು ಸ್ಮರಣೀಯ ವಾಗಿರಲು ಧರ್ಮದ ತಳಹದಿಯಲ್ಲಿ ಸಾಗಬೇಕು. ಜನಕಲ್ಯಾಣಕ್ಕಾಗಿ ಸಮರ್ಪಿಸಿ ಕೊಂಡ ಬಸವಾದಿ ಶರಣರ, ಸಂತರ, ಮಹಾತ್ಮರ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಕೊಳ್ಳಬೇಕು. ಲಿಂ. ನಿರಂಜನ ಮಹಾಸ್ವಾಮಿಳು ಕೈಗೊಂಡ ಸಮಾಜಮುಖಿ ಕಾರ್ಯ, ಧಾರ್ಮಿಕ ವಿಚಾರಗಳು, ಮಾನವೀಯ ಮೌಲ್ಯಗಳು ದಾರಿದೀಪವಾಗಿವೆ. ಅವರು ತೋರಿದ ಮಾರ್ಗದಲ್ಲಿಮಠವುಅನಾಥ,ಬಡಮಕ್ಕಳಿಗೆ ತ್ರಿವಿಧ ದಾಸೋಹ ಸೇವೆ ನೀಡುತ್ತಿರುವುದು ಶ್ಲಾಘನೀಯ ಎಂದರು.

ನವಲಗುಂದಗವಿಮಠದಬಸವಲಿಂಗ ಮಹಾಸ್ವಾಮಿಗಳು,ಮಣಕವಾಡದಅಭಿನವ ಮೃತ್ಯುಂಜಯಸ್ವಾಮಿಗಳು,ಅಕ್ಕಿಆಲೂರಿನ ಶಿವಬಸವ ಮಹಾಸ್ವಾಮಿಗಳು, ಬಳೂಟಗಿ ಶಿವಕುಮಾರದೇವರುಸೇರಿಜನಪ್ರತಿನಿಧಿಗಳು, ಗಣ್ಯಮಾನ್ಯರು ಉಪಸ್ಥಿತರಿದ್ದರು. ಶಿಕ್ಷಕ ರೇಣುಕಗೌಡ ಪಾಟೀಲ, ಮಹದೇವ ಬಿಷ್ಟನವರ,ಕೆ.ಎಸ್.ಇಟಗಿಮಠ,ಶಿವಾನಂದ ಕಟ್ಟಿಮನಿ ನಿರೂಪಿಸಿದರು.

**ಧರ್ಮಸಭೆ:** ಮಂಗಳವಾರ ಸಂಜೆ ರಥೋತ್ಸವದ ಬಳಿಕ ಮುಂಡರಗಿಯ ನಾಡೋಜ ಡಾ. ಅನ್ನದಾನೀಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಲಿಂ.ನಿರಂಜನ ಸ್ವಾಮಿಗಳ ಪುಣ್ಯಸ್ಮರಣೋತ್ಸವ ಮತ್ತು ಧರ್ಮಸಭೆ ಜರುಗಿತು. ಅನ್ನದಾನೀಶ್ವರ ಜಗದ್ಗುರುಗಳು ಆಶೀರ್ವಚನ ನೀಡಿ, ಜಾತ್ರೆ, ಹಬ್ಬ-ಹರಿದಿನಗಳು ಪರಸ್ಪರರಲ್ಲಿ ಸ್ನೇಹ, ಬಾಂಧವ್ಯ, ಸೌಹಾರ್ದತೆಯ ಭಾವನೆ ಬೆಸೆಯುತ್ತವೆ. ಜಾತ್ರೆಗಳ ಆಚರಣೆಯ ಸಂದರ್ಭದಲ್ಲಿ ಮಠ-ಮಾನ್ಯಗಳು ಆಚರಿಸಿಕೊಂಡು ಬರುತ್ತಿರುವ ಧಾರ್ಮಿಕ, ಸಾಮಾಜಿಕ ಕಾರ್ಯಗಳು ಸಮಾಜದ ಶ್ರೇಯೋಭಿವೃದ್ಧಿಗೆ ಮೂಲಾಧಾರವಾಗಿದೆ ಎಂದರು.

# ಭುವನೇಶ್ವರಿ ರಥಯಾತ್ರೆ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಇದೇ ಜ. 19, 20, 21ರಂದು ಗಜೇಂದ್ರಗಡ ಪಟ್ಟಣದಲ್ಲಿ ಗದಗ ಜಿಲ್ಲಾ 10ನೇ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಲಿದ್ದು, ತನ್ನಿಮಿತ್ತ ಹೊರಟಿರುವ ಭುವನೇಶ್ವರಿ ತಾಯಿ ರಥಯಾತ್ರೆಯನ್ನು ಬರಮಾಡಿಕೊಳ್ಳುವ ಪೂರ್ವಭಾವಿ ಸಭೆ ಜಕ್ಕಲಿ ಗ್ರಾಮ ಪಂಚಾಯಿತಿ ವತಿಯಿಂದ ಕನ್ನಡ ಗಂಡುಮಕ್ಕಳ ಶಾಲಾ ಆವರಣದ ಮಹಾತ್ಮಗಾಂಧಿ ಸ್ಮಾರಕದಲ್ಲಿ ನಡೆಯಿತು.

ಸಭೆಯ ಅಧ್ಯಕ್ಷತೆಯನ್ನು ಗ್ರಾ.ಪಂ ಅಧ್ಯಕ್ಷೆ ಗಂಗಮ್ಮ ಜಂಗಣ್ಣವರ ವಹಿಸಿ ಮಾತನಾಡಿ, ಜ. 18 ರಂದು ತಾಯಿ ಭುವನೇಶ್ವರಿಯ ರಥಯಾತ್ರೆ ಜಕ್ಕಲಿ ಗ್ರಾಮಕ್ಕೆ ಆಗಮಿಸಲಿದ್ದು, ಜ. 18ರಂದು ಗ್ರಾಮದ ಪ್ರಮುಖ ಬೀದಿಗಳಲ್ಲಿ ಅದ್ದೂರಿ ಮೆರವಣಿಗೆ ನಡೆಯಲಿದೆ. ಮೆರವಣಿಗೆಯ ದಾರಿಯುದ್ದಕೂ ಗ್ರಾ.ಪಂ ಕಾರ್ಮಿಕರು ಊರಿನ ಸ್ವಚ್ಛತೆಗೆ ಶ್ರಮವಹಿಸಬೇಕು. ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರೊಂದಿಗೆ ಮಹಿಳೆಯರು ಮೆರವಣಿಗೆ ಸಾಗುವ ಮಾರ್ಗದಲ್ಲಿ ರಂಗೋಲಿ ಹಾಕಿ, ಶಾಲಾ ಮಕ್ಕಳಿಂದ ರೂಪಕ, ಪ್ರಭಾತಫೇರಿ ನಡೆಸಬೇಕು. ಕನ್ನಡದ ತಾಯಿ ಭುವನೇಶ್ವರಿಯ ರಥಯಾತ್ರೆಯನ್ನು ಅದ್ದೂರಿಯಿಂದ ಬರಮಾಡಿಕೊಳ್ಳುವಂತೆ ತಿಳಿಸಿದ ಅವರು, ರೈತರು ತಮ್ಮ ಬಂಡಿಗಳನ್ನು ಅಲಂಕರಿಸಿ ಮೆರವಣಿಗೆಯಲ್ಲಿ ಪಾಲ್ಗೊಳ್ಳಬೇಕೆಂದರು.

ತಾ.ಪಂ ಸಿಇಓ ಚಂದ್ರಶೇಖರ ಕಂದಕೂರ ಮಾತನಾಡಿ, ಮೆರವಣಿಗೆ ಸಾಗುವ ರಸ್ತೆಯಲ್ಲಿ ಅಲಂಕಾರ, ಫ್ಲೆಕ್ಸ ಅಳವಡಿಸಿ, ಕನ್ನಡದ ಧ್ವಜಗಳನ್ನು ಮನೆಯ ಮೇಲೆಲ್ಲ ಹಾರಿಸಿ ಮೆರವಣಿಗೆಗೆ ಮೆರಗು ನೀಡಿರಿ ಎಂದರು.ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಎಸ್.ಎಸ್. ರಿತ್ತಿ ಮಾತನಾಡಿದರು. ಸಭೆಯಲ್ಲಿ ತಾ.ದೈ.ಶಿ. ಅಧಿಕಾರಿ ಆರ್.ಎಸ್. ನರೇಗಲ್ಲ, ಗ್ರಾ.ಪಂ ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು, ಸರಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಬಿ.ಆರ್. ಗದಗಿನ, ಗ್ರಾಮದ ಗುರು-ಹಿರಿಯರು, ಯುವಕರು, ಕಸಾಪ ಗ್ರಾಮ ಘಟಕದ ಅಧ್ಯಕ್ಷರು, ಸದಸ್ಯರು, ಎಲ್ಲ ಇಲಾಖೆಗಳ ಅಧಿಕಾರಿಗಳು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಸೇರಿದಂತೆ ಕನ್ನಡ ಅಭಿಮಾನಿಗಳು ಉಪಸ್ಥಿತರಿದ್ದರು.

# ಪರೀಕ್ಷಾ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಜನವರಿ 18 ರಂದು ಬೆ 11 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಜವಾಹರ ನವೋದಯ ವಿದ್ಯಾಲಯಕ್ಕೆ ಪ್ರವೇಶ ಕುರಿತು ಪರೀಕ್ಷೆಗಳು ಜರುಗಲಿವೆ. ಗದಗ ಜಿಲ್ಲೆಯಲ್ಲಿ ಒಟ್ಟು 20 ಕೇಂದ್ರಗಳಲ್ಲಿ ಜವಾಹರ ನವೋದಯ ವಿದ್ಯಾಲಯದ ಪ್ರವೇಶ ಪರೀಕ್ಷೆಯು ಜರುಗಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 20 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಜನವರಿ 18 ರಂದು ಬೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಬುಕ್ ಸ್ಟಾಲ್ , ಸೈಬರ್ ಸೆಂಟರ್ , ಬುಕ್ ಸ್ಟಾಲ್, ಫೋ-ಟೋ ಕಾಪಿಯರ್‌ಗಳನ್ನು ಬಂದ ಮಾಡಲು ಆದೇಶಿಸಿದೆ.

ಈ ಪ್ರದೇಶದ ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು , ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಮೊಬೈಲ್ / ಸೆಲ್ಯೂಲರ್ ಫೋನ್, ಟ್ಯಾಬ್ಲೆಟ್ , ಪೆನ್ ಡ್ರೈವ್ , ಬ್ಲೂ ಟೂತ್ ಡಿವೈಸ್, ಸ್ಮಾರ್ಟ್ ವಾಚ್, ಕ್ಯಾಲ್ಕುಲೇಟರ್ ಮತ್ತು ಇತರೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ಸ್ ಉಪಕರಣಗಳು ಅಥವಾ ಲಾಗ್ ಟೇಬಲ್ಸ್, ಕೈ ಚೀಲ, ಪರ್ಸ್ ,ನೋಟುಗಳು, ಚಾರ್ಟ್, ಬಿಡಿ ಹಾಳೆಗಳು ಅಥವಾ ರೆಕಾರ್ಡಿಂಗ್ ವಸ್ತುಗಳನ್ನೂ ಸೇರಿದಂತೆ ಇನ್ನಿತರೆ ಯಾವುದೇ ರೀತಿಯ ಉಪಕರಣಗಳನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಸಿಕ ಸಂತೆಯಿಂದ ಸ್ತ್ರೀ ಸಬಲೀಕರಣ

▶▶ಮೊದಲನೇ ಪುಟದಿಂದ

ಆಹಾರ ಉತ್ಪನ್ನಗಳು, ಕರಕುಶಲ ವಸ್ತುಗಳು ಲಭ್ಯವಿದ್ದವು.

ಸಂಜೀವಿನಿ ಯೋಜನೆಯಡಿ ಆರ್ಥಿಕ ಸೌಲಭ್ಯ ಪಡೆದಿರುವ ಮಹಿಳಾ ಸ್ವ-ಸಹಾಯ ಗುಂಪುಗಳ ಸದಸ್ಯರು ಮನೆಗಳಲ್ಲಿಯೇ ವಿವಿಧ ಉತ್ಪನ್ನಗಳನ್ನು ತಯಾರಿಸುತ್ತಿದ್ದಾರೆ. ಈ ಉತ್ಪನ್ನಗಳಿಗೆ ಮಾರುಕಟ್ಟೆ ದೊರಕಿಸಿ ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವ ಉದ್ದೇಶದಿಂದ ಮಾಸಿಕ ಸಂತೆಯನ್ನು ಆರಂಭಿಸಲು ಸರ್ಕಾರ ಸೂಚಿಸಿದೆ. ಅದರಂತೆ ಜಿಲ್ಲೆಯಲ್ಲಿ ಮೊದಲ ಬಾರಿಗೆ ರೋಣ ಪಟ್ಟಣದಲ್ಲಿ ಈ ಸಂತೆ ಆರಂಭಿಸಲಾಗಿದೆ. ಇತಂಹ ಮಾಸಿಕ ಸಂತೆಯು ಮಹಿಳೆಯರ ಪಾಲಿಗೆ ದಾರಿದೀಪವಾಗುತ್ತವೆ. ಪ್ರತಿ ಗ್ರಾಮದಲ್ಲೂ ಸಹ ಇಂತಹ ಮಾಸಿಕ ಸಂತೆಯನ್ನು ಮಾಡಲು ನಮ್ಮ ಇಓ ಅವರಿಗೆ ಸೂಚನೆ ನೀಡಿದ್ದೇನೆ. ಇದರಿಂದ ಮಹಿಳಾ ಸಂಘಗಳು ಹಾಗೂ ಮಹಿಳೆಯರು ಆರ್ಥಿಕವಾಗಿ ಸಬಲರಾಗುತ್ತಾರೆ ಎಂದರು.

ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಮಾತನಾಡಿ, ಸಿಇಓ ಅವರ ಮಾರ್ಗದರ್ಶನದಲ್ಲಿ ಇಂತಹ ಒಂದು ಪರಿಕಲ್ಪನೆ ಮಾಡಲಾಗಿದ್ದು, ಈ ಕಾರ್ಯಕ್ರಮವನ್ನು ಶಾಸಕರ ಅಧ್ಯಕ್ಷತೆಯಲ್ಲಿ ಮಾಡಲಾಗಿದೆ. ಮಾಸಿಕ ಸಂತೆಗಳಲ್ಲಿ ಹೆಚ್ಚಿನ ಸಂಘಗಳು ಪಾಲ್ಗೊಳ್ಳಬೇಕು. ಗುಣಮಟ್ಟದ ಹಾಗೂ ಪರಿಶುದ್ಧವಾದ ಉತ್ಪನ್ನ ತಯಾರಿಸಬೇಕು. ಉತ್ಪನ್ನಗಳ ಬಗ್ಗೆ ಪ್ರಚಾರವನ್ನು ಮಾಡಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷರಾದ ಗೀತಾ ಮಾಡಲಗೇರಿ, ಉಪಾಧ್ಯಕ್ಷರಾದ ದುರಗಪ್ಪ ಹಿರೇಮನಿ, ತಾಲೂಕಾ ಸಂಜೀವಿನಿ ಒಕ್ಕೂಟದ ಅಧ್ಯಕ್ಷರಾದ ಉಮಾ ಮಂತೂರ, ತಾಲೂಕಿನ ಎಲ್ಲಾ ಸ್ವ-ಸಹಾಯ ಸಂಘದ ಸದಸ್ಯರು ಹಾಗೂ ಸಂಜೀವಿನಿ ಸಿಬ್ಬಂದಿಗಳು ಸೇರಿದಂತೆ ಸಾರ್ವಜನಿಕರು ಭಾಗವಹಿಸಿದ್ದರು.

# ರಾಜಕಾರಣದಲ್ಲಿ ನೀತಿ ಇಲ್ಲದಾಗಿದೆ

▶▶ಮೊದಲನೇ ಪುಟದಿಂದ

ಅದನ್ನು ಜ. 20ರಂದು ಬೆಂಗಳೂರಿನಲ್ಲಿ ಬಿಡುಗಡೆ ಮಾಡಿ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಗುವುದು ಎಂದರು.

ರೈತ ಮತ್ತು ನಾಡಿನ ಪರವಾದ ಹೊಸ ಪ್ರಣಾಳಿಕೆ ಬಿಡುಗಡೆಗೆ ಕನ್ನಡ ಮತ್ತು ರೈತಪರ ಸಂಘಟನೆಗಳು ಕೈ ಜೋಡಿಸಿವೆ. ಮಾಜಿ ಸಚಿವ ಸಿ.ಎಂ. ಇಬ್ರಾಹಿಂ, ಬಿ.ಟಿ. ಲಲಿತಾ ನಾಯಕ, ನಾರಾಯಣಗೌಡ್ರ ಸಹಿತ ಅನೇಕ ಗಣ್ಯರು ಅಂದು ರೈತರ ಜೊತೆಗಿದ್ದು, ಹೊಸ ಪ್ರಣಾಳಿಕೆ ಬಿಡುಗಡೆ ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಗದಗ ಜಿಲ್ಲೆಯ ನೀರಾವರಿ, ಹೆದ್ದಾರಿ, ರೈಲ್ವೆ ಸಹಿತ ಅನೇಕ ಜ್ವಲಂತ ಸಮಸ್ಯೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು. ಸರಕಾರ ನಮ್ಮ ಪ್ರಣಾಳಿಕೆಗೆ ಸ್ಪಂದಿಸದಿದ್ದರೆ, ಮುಂದಿನ ದಿನಗಳಲ್ಲಿ ದೆಹಲಿಯಲ್ಲಿ ಹೋರಾಟ ನಡೆಸುವ ಚಿಂತನೆ ಇದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಸವರಾಜ ನವಲಗುಂದ, ಶಿವಯೋಗಯ್ಯ ಶಶಿಮಠ, ಮಂಜುನಾಥ ವಡ್ಡರ್, ಅರುಣಕುಮಾರ ತಿರ್ಲಾಪುರ, ಎಚ್.ಡಿ. ದೊಡ್ಡಮನಿ, ಸಂತೋಷ ಹೂಗಾರ ಇತರರು ಉಪಸ್ಥಿತರಿದ್ದರು.


ಕರ್ನಾಟಕ ಸರ್ಕಾರ

## ಗ್ರಾಮ ಪಂಚಾಯತ ಕಾರ್ಯಾಲಯ, ಕುಂಟೋಜಿ

ತಾಲೂಕ-ಗಜೇಂದ್ರಗಡ ಜಿಲ್ಲಾ-ಗದಗ ಇ-ಮೇಲ್: kuntogi.ron.gdg@gmail.com

ಗ್ರಾ.ಪಂ./ಕುಂಟೋಜಿ/ನರೇಗಾ/2024-25 ದಿನಾಂಕ: 08/01/2025

### ದರಪಟ್ಟಿ ಪ್ರಕಟಣೆ

2024 2025 ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಯೋಜನೆಯಡಿಯಲ್ಲಿ ಅನುಷ್ಠಾನಗೊಳ್ಳುವ ಈ ಕೆಳಕಂಡ ಕಾಮಗಾರಿಗಳಿಗೆ ವಿವಿಧ ರೀತಿಯ ಸಾಮಗ್ರಿಗಳನ್ನು ಪೂರೈಸುವ ಸಂಬಂಧ ದರಪಟ್ಟಿ ಆಹ್ವಾನಿಸಲಾಗಿದೆ ಇದರ ಪ್ರಯುಕ್ತ ಜಿಲ್ಲಾ ಡಿ.ಪಿ.ಸಿ ಲಾಗಿನ್‌ನಲ್ಲಿ ನೋಂದಾಯಿತ ಇರುತ್ತದೆ. ಆಸಕ್ತ ಸರಬರಾಜುದಾರರು ದರಪಟ್ಟಿಯನ್ನು ಸಲ್ಲಿಸಬಹುದಾಗಿದ್ದು ವಿವರ ಮತ್ತು ವೇಳಾಪಟ್ಟಿ ಈ ಕೆಳಗಿನಂತೆ ಇರುತ್ತದೆ.

**ಕಾಮಗಾರಿಯ ಹೆಸರು ಮತ್ತು ಅಂದಾಜು ಮೊತ್ತದ ವಿವರ**

| ಕ್ರ ಸಂ | ಕಾಮಗಾರಿ ಹೆಸರು | ಕಾಮಗಾರಿಗಳಿಗೆ ಪೂರೈಸಬೇಕಾದ ಸಾಮಗ್ರಿ ಮೊತ್ತ. (ಲಕ್ಷ ಗಳಲ್ಲಿ) |
|---|---|---|
| 1 | ಜಿಗೇರಿ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಕಂಪೌಂಡ ನಿರ್ಮಾಣ ಪೂರ್ವ ಭಾಗದ ಕಡೆ | 1.75 |
| 2 | ಜಿಗೇರಿ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಮೇನ್ ರಸ್ತೆಯಿಂದ ಕಂಪೌಂಡ ನಿರ್ಮಾಣ | 1.75 |
| 3 | ಬೆಣಚಮಟ್ಟಿ ಗ್ರಾಮದ ಮೇನ್ ರಸ್ತೆಯಿಂದ ಡೊಳ್ಳಿನ ಮನೆಯ ಹತ್ತಿರ ಸಿ ಸಿ ರಸ್ತೆ ನಿರ್ಮಾಣ | 1.08 |
| 4 | ಗೌಡಗೇರಿ ಗ್ರಾಮದ ರಾಮು ಮಾಳೊತ್ತರ ಮನೆಯಿಂದ ಮಿನಿ ಟ್ಯಾಂಕ ವರೆಗೆಗಟಾರ ನಿರ್ಮಾಣ | 0.965 |
| 5 | ಗೌಡಗೇರಿ ಗ್ರಾಮದ ಮೇನ ರಸ್ತೆಯಿಂದ ಸೇವಾಲಾಲ ಸಮುದಾಯ ಭವನದ ವರೆಗೆ ಗಟಾರ ನಿರ್ಮಾಣ | 0.90 |
| 6 | ವದೆಗೋಳ ಗ್ರಾಮದ ಅಡಿವೆಪ್ಪ ಗೌಡ್ರ ಹೊಲದಿಂದ ಬಸವರಾಜ ಕುರಿ ಮೊರಂ ಹಾಗೂ ಮೇಟ್ಲಿಂಗ್ ರಸ್ತೆ ಮಾಡುವದು | 0.97 |
| 7 | ಬೆಣಚಮಟ್ಟಿ ಗ್ರಾಮದ ಮುದಕಪ್ಪ ಮಾದರ ಮನೆಯಿಂದ ಕವಡಕಿಯವರ ಮನೆಯವರೆಗೆ ಗಟಾರ ನಿರ್ಮಾಣ | 0.85 |
| 8 | ಗೌಡಗೇರಿ ಗ್ರಾಮದ ದುರಗಪ್ಪ ಜನಾಯಿ ಇವರ ಹೊಲದಿಂದ ಸಂಗಟಿ ಇವರ ಹೊಲದವರೆಗೆ ಸಿಮೇ ವರೆಗೆ ಮೋರಂ ಹಾಗೂ ಮೇಟ್ಲಿಂಗ್ ರಸ್ತೆ ನಿರ್ಮಾಣ | 1.94 |
| 9 | ಗೌಡಗೇರಿ ಗ್ರಾಮದ ಎರ್ ಟ್ಯಾಂಕಿನಿಂದ ಸ್ವಾಮಿಯವರ ಹೊಲದವರೆಗೆ ಮೋರಂ ಮೇಟ್ಲಿಂಗ ರಸ್ತೆ ಮಾಡುವದು. | 0.97 |
| 10 | ಬೆಣಚಮಟ್ಟಿ ಗ್ರಾಮದ ಅಂಗನವಾಡಿ ಕೇಂದ್ರದಿಂದ ಕಲಾಲಬಂಡಿ ಯವರ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 1.09 |
| 11 | ಬೆಣಚಮಟ್ಟಿ ಗ್ರಾಮದ ವೆಂಕಟೇಶ ನಾಯ್ಕರವರ ಮನೆಯಿಂದ ಒಳ ರಸ್ತೆಯವರೆಗೂ ಗಟಾರ ನಿರ್ಮಾಣ | 0.895 |
| 12 | ಕುಂಟೋಜಿ ಗ್ರಾಮದ ಕಳಕಪ್ಪ ಚವಡಿ ಮನೆಯಿಂದ ಮ್ಯಾಕಲಝುರಿ ಸಿಮೇ ವರೆಗೆ ಮೊರಂ ಹಾಗೂ ಮೇಟ್ಲಿಂಗ್ ರಸ್ತೆ ಮಾಡುವದು. | 0.98 |
| 13 | ಬೆಣಚಮಟ್ಟಿ ಗ್ರಾಮದ ಶೇಖಪ್ಪ ಪೂಜಾರ ಮನೆಯಿಂದ ಕೇಶಪ್ಪ ಪೂಜಾರ ಮನೆಯವರೆಗೆ ಗಟಾರ ನಿರ್ಮಾಣ | 1.82 |
| 14 | ಕುಂಟೋಜಿ ಗ್ರಾಮದ ವಿರಭಸಯ್ಯ ಕಾರಡಗಿಮಠ ಮನೆಯಿಂದ ಕರಿಯಪ್ಪ ಚೋಟಿ ಚೋಟಿ ಮನೆಯವರೆಗೆ ಗಟಾರ ನಿರ್ಮಾಣ | 2.09 |
| 15 | ವದೆಗೋಳ ಗ್ರಾಮದ ಯಮನಪ್ಪ ಬಂಕದ ಮನೆಯಿಂದ ಕಳಕಪ್ಪ ಕನಕೊಪ್ಪದ ಇವರ ಮನೆಯವರೆಗೆ ಗಟಾರ ನಿರ್ಮಾಣ | 1.40 |
| 16 | ಕುಂಟೋಜಿ ಗ್ರಾಮದ ಅಮರವ್ವ ರೋಣದ ಮನೆಯಿಂದ ಬೆಣಚಮಟ್ಟಿ ರಸ್ತೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 1.39 |
| 17 | ಕುಂಟೋಜಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಿಂದ ಮಳಗಿಯವರ ಮನೆಯವರೆಗೆ ಗಟಾರ ನಿರ್ಮಾಣ | 1.80 |
| 18 | ಕುಂಟೋಜಿ ಗ್ರಾಮದ ಶೇಖಪ್ಪ ಕೂಕನೂರಮಠ ಮನೆಯಿಂದ ರಾಚಪ್ಪ ಹಡಪದ ಮನೆಯವರೆಗೆ ಗಟಾರ ನಿರ್ಮಾಣ | 1.11 |
| 19 | ಮ್ಯಾಕಲಝುರಿ ಗ್ರಾಮದ ಪುಷ್ಪಾ ಬಂಡಿ ಇವರ ಮನೆಯಿಂದ ಲಕ್ಷ್ಮಪ್ಪ ಗುಳೇದ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 1.08 |
| 20 | ಮ್ಯಾಕಲಝುರಿ ಗ್ರಾಮದ ಶರಣಪ್ಪ ಬಂಡಿ ಇವರ ಮನೆಯಿಂದ ಸರಕಾರಿ ಶಾಲೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 2.19 |
| 21 | ಕುಂಟೋಜಿ ಗ್ರಾಮದ ಸರಕಾರಿ ಪ್ರೌಢ ಶಾಲೆಯ ಕಂಪೌಂಡದಿಂದ ಮಳಗಿಯವರ ಹೊಲದವರೆಗೆ ಮೊರಂ ಹಾಗೂ ಮೆಟ್ಲಿಂಗ್ ರಸ್ತೆ ಮಾಡುವದು. | 1.94 |

ಷರಾಃ ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸವುದು ಹಾಗೂ ಪ್ರತಿ ಕಾಮಗಾರಿಯ ಖಾಲಿ ಟೆಂಡರ್ ಫಾರಂ ಬೆಲೆ 500 ರೂ. ಗಳು, ನಿಗದಿಪಡಿಸಿದೆ.

**(01)** ದರಪಟ್ಟಿ ಅವಧಿ **14-01-2025** ರಿಂದ **23-01-2025** ರವರೆಗೆ **(02)** ಭರ್ತಿ ಮಾಡಿದ ಅರ್ಜಿಗಳನ್ನು ಕಳಿಸಲು ಕೊನೆಯ ದಿನಾಂಕ 23.01.2025 ಮಧ್ಯಾಹ್ನ 12.30ಘಂಟೆಯವರೆಗೆ. **(03)** ದರಪಟ್ಟಿ ತೆರೆಯುವ **ದಿನಾಂಕ 23-01-2025 ಮಧ್ಯಾಹ್ನ 12.30 ಘಂಟೆಯ ನಂತರ.** **(04)** ಅರ್ಜಿ ಸಲ್ಲಿಸುವ ಆಸಕ್ತರು ನೊಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು. **(05)** ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್ ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಯನ್ನು ಸಲ್ಲಿಸಬಹುದು. **(06)** ಷರತ್ತುಗಳು ಹಾಗೂ ಸಾಮಗ್ರೀ ವಿವರ ಮತ್ತು ಇತರೆ ವಿಷಯಗಳ ಮಾಹಿತಿಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕುಂಟೋಜಿ ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಿ ಮಾಹಿತಿ ಪಡಯಬಹುದಾಗಿದೆ. **(07)** ದರಪಟ್ಟಿಯನ್ನು ಅಂಗಿಕರಿಸುವ /ರದ್ದು ಪಡಿಸುವ /ದಿನಾಂಕ ಮುಂದೂಡುವ ಅಧಿಕಾರವನ್ನು ಗ್ರಾಮ ಪಂಚಾಯತಿ ಕುಂಟೋಜಿಗೆ ತನ್ನಲ್ಲಿ ಕಾಯ್ದಿರಿಸಿಕೊಂಡಿರುತ್ತದೆ.

ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು
ಗ್ರಾಮ ಪಂಚಾಯತ ಕಾರ್ಯಾಲಯ, ಕುಂಟೋಜಿ

ವಾ.ಸಾ.ಇ/ಗದಗ/536/ದೇಶಪಾಂಡೆಪಬ್ಲಿಸಿಟಿ/2024-25


### ‘ಅಖಿಲ ಕರ್ನಾಟಕ ಮಾಜಿ ಸೈನಿಕ ಸಂಘ ನರೇಗಲ್ಲ’ ಅಸ್ತಿತ್ವಕ್ಕೆ

# ಸಮಸ್ಯೆಗಳ ಪರಿಹಾರಕ್ಕೆ ಸಂಘಟನೆ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಪಟ್ಟಣದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ಅಸ್ತಿತ್ವಕ್ಕೆ ಬಂದಿದ್ದು, ನವನಗರದಲ್ಲಿನ ನಿವೃತ್ತ ಮೇಜರ್ ರಾಮಪ್ಪ ಸಕ್ರೋಜಿ ಅವರ ನಿವಾಸದಲ್ಲಿ ನಿವೃತ್ತ ಸೈನಿಕರ ಸಂಘಟನೆಗಾಗಿ ಈಚೆಗೆ ಸಭೆ ನಡೆಯಿತು.

ಸಭೆಯನ್ನುದ್ದೇಶಿಸಿ ನಿವೃತ್ತ ಮೇಜರ್ ರಾಮಪ್ಪ ಸಕ್ರೋಜಿ ಮಾತನಾಡಿ, ನರೇಗಲ್ಲ ಪಟ್ಟಣದಲ್ಲಿ ನಿವೃತ್ತ ಸೈನಿಕರಿಗಾಗಿ ಸಂಘವನ್ನು ಸ್ಥಾಪಿಸಲಾಗುತ್ತಿದೆ. ಇದನ್ನು ‘ಅಖಿಲ ಕರ್ನಾಟಕ ಮಾಜಿ ಸೈನಿಕ ಸಂಘ ನರೇಗಲ್ಲ’ ಎಂದು ಘೋಷಿಸಲಾಗಿದ್ದು, ನಿವೃತ್ತ ಸೈನಿಕರ ಸಮಸ್ಯೆಗಳನ್ನು ಆಲಿಸಿ ಅವರ ದೈಹಿಕ, ಆರ್ಥಿಕ, ಪಿಂಚಣಿಯ ದಾಖಲೆಗಳ ಹಾಗೂ ಇನ್ನಿತರೆ ಕಾನೂನಾತ್ಮಕ ತೊಡಕುಗಳ ಪರಿಹಾರಕ್ಕೆ ನಾವು ರಚಿಸಿಕೊಂಡ ಸಂಘದ ಮೂಲಕ ಪರಿಶೀಲಿಸಿ ಅವುಗಳಿಗೆ ಪರಿಹಾರ ಕಂಡುಕೊಳ್ಳಲು ಈ ಸಂಘಟನೆ ಸಹಕಾರಿಯಾಗಲಿದೆ ಎಂದರು.

ಸಂಘಕ್ಕೆ ಅಗತ್ಯವಿರುವ ನೋಂದಣಿ, ಎಲ್ಲ ನಿವೃತ್ತ ಸೈನಿಕರಿಗೆ ಬೇಕಾದ ಡ್ರೆಸ್ ಕೋಡ್ ಸೇರಿದಂತೆ ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಸಂಘಟನೆ ಸದಾ ಸನ್ನದ್ಧವಾಗಿದೆ ಎಂದು ರಾಮಪ್ಪ ಸಕ್ರೋಜಿತಿಳಿಸಿದರು.

ಶಿವಪುತ್ರಪ್ಪ ಎಂ ಸಂಗನಾಳ, ಉಮೇಶ ಕರಮುಡಿ, ಶಿವಪ್ಪ ಶಿವಾಪುರ, ಚಂದ್ರಶೇಖರ ಹರ್ತಿ, ಮಂದಾಲಪ್ಪ ಸಂಗನಾಳ, ಆಂಜನೇಯ ಪೂಜಾರ್, ಪ್ರಭುದೇವ ಮುಕ್ಕನಗೌಡರ್, ಸಂಗಪ್ಪ ಕುಷ್ಟಗಿ, ಬಸವರಾಜ ಕಡೆತೋಟದ, ಗುರುಶಾಂತಗೌಡ ಮಲ್ಲನಗೌಡರ್ , ದಾದಾಸಾಬ್ ನದಾಫ್, ಶಿವಾನಂದ ಬಂಡಿಹಾಳ, ಮಲ್ಲಿಕಾರ್ಜುನಗೌಡ ಮಲ್ಲನಗೌಡರ, ಈಶ್ವರಚಂದ್ರ ಬಾಗಲಿ, ಸುಮಿತ್ರಾಬಾಯಿ ದಳವಾಯಿ, ದಾವಲಸಾಬ್ ಕಿಲ್ಲೇದಾರ್, ಬಸವೇಶ್ವರ ಚಿಕ್ಕೊಪ್ಪದ, ಕುಮಾರಸ್ವಾಮಿ ಕೆ. ರಾಮಪ್ಪ ವೈ ರೋಣಾಡ್, ರೇವಣಸಿದ್ದಪ್ಪ ನರಗುಂದ, ಈರಪ್ಪ ದೊಡ್ಡಣ್ಣನವರ ಮತ್ತು ಬಲಭೀಮ ಮಾರನಬಸರಿ ಸೇರಿದಂತೆ ಇನ್ನುಳಿದ ನಿವೃತ್ತ ಸೈನಿಕರು ಉಪಸ್ಥಿತರಿದ್ದರು.

### ಸಂಘದ ಪದಾಧಿಕಾರಿಗಳು

ನಿವೃತ್ತ ಮೇಜರ್ ರಾಮಪ್ಪ ಸಕ್ರೋಜಿ ಗೌರವ ಅಧ್ಯಕ್ಷ, ನಿವೃತ್ತ ಸುಬೇದಾರ್ ಮೇಜರ್ ಶಿವಪುತ್ರಪ್ಪ ಮಂದಾಲಪ್ಪ ಸಂಗನಾಳ ಅಧ್ಯಕ್ಷ, ನಿವೃತ್ತ ಹೆಡ್ ಕಾನ್‌ಸ್ಟೇಬಲ್ ಮಲ್ಲಿಕಾರ್ಜುನಗೌಡ ಮಲ್ಲನಗೌಡ್ರ ಉಪಾಧ್ಯಕ್ಷ, ನಿವೃತ್ತ ಹವಾಲ್ದಾರ್ ದಾದಾಸಾಬ್ ನದಾಫ್ ಪ್ರಧಾನ ಕಾರ್ಯದರ್ಶಿ, ಹೆಡ್ ಕಾನ್‌ಸ್ಟೇಬಲ್ ರೇವಣಸಿದ್ದಪ್ಪ ನರಗುಂದ ಸಹ ಕಾರ್ಯದರ್ಶಿ, ಶಿವಾನಂದ ಬಂಡಿಹಾಳ ಖಜಾಂಚಿ, ನಿರ್ದೇಶಕ ಮಂಡಳಿ ಸದಸ್ಯರಾಗಿ ಪ್ರಭುದೇವ ಮುಕ್ಕನಗೌಡರ, ಗುರುಶಾಂತಗೌಡ ಮಲ್ಲನಗೌಡರ, ಈಶ್ವರಚಂದ್ರ ಬಾಗಲಿ, ಶ್ರೀಕಾಂತ ಕರಡಿ ಅವರನ್ನೊಳಗೊಂಡಂತೆ ಸಂಘ ರಚನೆ ಮಾಡಲಾಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka